

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

SK NEWS ಕನ್ನಡ

SIHI KAHI

KANNADA DAILY MORNING BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

RNI REG No. : KARKAN/2016/75068

Volume : 07 | Issue : 244 | Sunday 08-06-2025 | E-mail : maruti.b.hosamani76@gmail.com | Page: 4 | Price : Rs. 1/-


# ಕೊತಬಾಳ ಗ್ರಾಮದಲ್ಲಿ ಅನಾಥ ಗಂಡು ಶಿಶು ಪತ್ತೆ

**ಸಿಹಿ ಕಹಿ ಸುದ್ದಿ,**

**ಕೊತಬಾಳ:**ರೋಣತಾಲೂಕಿನಕೊತಬಾಳ ಗ್ರಾಮದಲ್ಲಿ ಶುಕ್ರವಾರ ಅನಾಥ ಗಂಡು ಶಿಶು ಪತ್ತೆಯಾಗಿದೆ. ವಾರಸುದಾರರು ರಾತ್ರಿ ವೇಳೆ ಯಾರು ಇಲ್ಲದ ಸಮಯದಲ್ಲಿ ಗ್ರಾಮದ ರಸ್ತೆಯ ಪಕ್ಕದಲ್ಲಿ ಇಟ್ಟು ಹೋಗಿದ್ದಾರೆ. ನಸುಕಿನ ಜಾವ ಹೊಲಕ್ಕೆ ಬಿತ್ತಲು ಹೋಗುತ್ತಿದ್ದ ರೈತರೊಬ್ಬರು ಮಗು ಅಳುವುದನ್ನು ಕೇಳಿ ತಕ್ಷಣ ಅಲ್ಲಿನ ಅಂಗನವಾಡಿ ಕಾರ್ಯಕರ್ತೆಗೆ ವಿಷಯ ತಿಳಿಸಿದ್ದಾರೆ. ಆಗ ಕಾರ್ಯಕರ್ತೆಯು ಮಗು ರಕ್ಷಣೆ ಮಾಡಿ ಶಿಶು ಅಭಿವೃದ್ಧಿ ಅಧಿಕಾರಿ ಶಿವಗಂಗಮ್ಮ ಅವರಿಗೆ ವಿಷಯ ತಿಳಿಸಿದ್ದಾರೆ. ಶಿಶು ಅಭಿವೃದ್ಧಿ ಅಧಿಕಾರಿ ಶಿವಗಂಗಮ್ಮ ಸ್ಥಳೀಯ ಆರೋಗ್ಯ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಆಗಮಿಸಿ ಮಗುವನ್ನು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ಕೊಂಡೊಯ್ದು ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ. ಮಗು ಸಂಪೂರ್ಣ ಆರೋಗ್ಯ ವಂತವಾಗಿದ್ದು, ಈ ಮಗು ಯಾರಿಗೆ ಸೇರಿದ್ದು? ಎಂಬುದು ತಿಳಿಯದ್ದರಿಂದ ಜಿಲ್ಲಾ ಮಕ್ಕಳ ಕಲ್ಯಾಣ ಇಲಾಖೆಗೆ ಕಳುಹಿಸಿ ಕೊಡಲಾಗಿದೆ ಎಂದು ತಾಲೂಕಾ ಶಿಶು ಅಭಿವೃದ್ಧಿ ಅಧಿಕಾರಿ ಶಿವಗಂಗಮ್ಮ ತಿಳಿಸಿದ್ದಾರೆ.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ. ರೋಣ.ಗದಗ**



**ನವಜಾತು ಶಿಶುಗಳನ್ನು ಬೀದಿಯಲ್ಲಿ ಬಿಟ್ಟು ಹೋಗುವುದು ಸರಿಯಲ್ಲ. ಮಕ್ಕಳು ಬೇಡವಾಗಿದ್ದರೆ ಅಥವಾ ಸಾಕಲು ಆಗದಿದ್ದರೆ ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಗಮನಕ್ಕೆ ತಂದರೆ ಮಗುವನ್ನು ಜಿಲ್ಲಾ ತೊಟ್ಟಿಲು ಕೇಂದ್ರಗಳಲ್ಲಿ ಬೆಳೆಸಲಾಗುವುದು. ಮಗು ಬೇಕು ಎನ್ನುವವರಿಗೆ ದತ್ತು ಕೇಂದ್ರಗಳಿಂದ ಕಾನೂನು ಪ್ರಕಾರ ಕೊಡಲಾಗುವುದು.**

# ಯಲಗೋಡದಲ್ಲಿ ಕೃಷಿ ಅಭಿಮಾನ ಕಾರ್ಯಕ್ರಮ






**ಸಿಹಿ ಕಹಿ ಸುದ್ದಿ,**

**ಯಲಗೋಡ :** ದೇವರ ಹಿಪ್ಪರಗಿ ತಾಲೂಕಿನ ಯಲಗೋಡ ಗ್ರಾಮ ಪಂಚಾಯತಿಯಲ್ಲಿ ದಿನಾಂಕ 07.06.2025 ರಂದು ವಿಕಸಿತ ಕೃಷಿ ಅಭಿಯಾನ ಕಾರ್ಯಕ್ರಮ ಹಾಗೂ ನೈಸರ್ಗಿಕ ಕೃಷಿ ಪದ್ಧತಿಯ ಬಗ್ಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನಿಗಳು ಹಾಗೂ ಕೃಷಿ ಅಧಿಕಾರಿಗಳು ಆಗಮಿಸಿ ಮುಂಗಾರು ಹಂಗಾಮಿನ ಬಿತ್ತನೆ ವಿಧಾನಗಳ ಬಗ್ಗೆ ಹಾಗೂ ಬೀಜ ಮೊಳಕೆ ಪ್ರಮಾಣ ಗುರುತಿಸುವುದು ಕೀಟನಾಶಕ ಸಿಂಪಡಣಾ ವಿಧಾನ ಹಾಗೂ

ಕೀಟ ಬಾಧೆಯ ರೋಗ ಲಕ್ಷಣಗಳ ಹತೋಟಿ ಕ್ರಮಗಳ ಬಗ್ಗೆ ಹಾಗೂ ನೈಸರ್ಗಿಕ ಕೃಷಿ ಪದ್ಧತಿಯ ಬಗ್ಗೆ ಮತ್ತು ಜಾನುವಾರುಗಳ ಸಂರಕ್ಷಣೆ ಹಾಗೂ ರೋಗ ಭಾದೆಯ ಹತೋಟಿಯ ಕ್ರಮಗಳ ಬಗ್ಗೆ ಸವಿಸ್ತಾರವಾಗಿ ರೈತ ಬಾಂಧವರಿಗೆ ವಿವರಿಸಿ ಕೃಷಿ ವಿಜ್ಞಾನಿಗಳಾದ ಡಾಕ್ಟರ್, ಪ್ರೇಮ್ ಚಂದ್ರ ಇಂಡಿ ಡಾಕ್ಟರ್, ಪ್ರಸಾದ್ ಹಾಗೂ ಕೃಷಿ ಅಧಿಕಾರಿಗಳಾದ ಶ್ರೀ ಶರಣಗೌಡ ಬಿರಾದಾರ್ ಮಾಹಿತಿಯನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ಯಲಗೋಡ ಗ್ರಾಮದ ರೈತ ಮುಖಂಡರಾದ ಅಣ್ಣಪ್ಪಗೌಡ ಪಾಟೀಲ ಸೋಮು ಹೋಸಮನಿ, ಮುರಗೇಪ್ಪ ದೊಡ್ಡಮನೆ ಬಾಬು ಬಾಗೇವಾಡಿ ಮಾಂತು ಉತ್ಯಾಳ ಮಾಂತಪ್ಪ ಗಾಣಗೇರ ನೀಲಪ್ಪ ಹಡಪದ ಹಾಗೂ ಸರ್ವ ರೈತ ಬಾಂಧವರು ಹಾಗೂ ಮಹಿಳಾ ಒಕ್ಕೂಟದ ಎಂ.ಬಿ.ಕೆ ಕೃಷಿ ಸಖಿ ಪಶು ಸಖಿ ಪಾಲ್ಗೊಂಡಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಭೀಮಪ್ಪ.ಹಚ್ಯಾಳ.ದೇವರ ಹಿಪ್ಪರಗಿ**

# ಡಿ.ಎಸ್.ಎಸ್ ಜಿಲ್ಲಾ ಸಂಘಟನಾ ಸಂಚಾಲಕರಾಗಿ ಯಮನಪ್ಪ. ಪಿ. ಭಜಂತ್ರಿ ಆಯ್ಕೆ

**ಸಿಹಿ ಕಹಿ ಸುದ್ದಿ,**

**ಬಾಗಲಕೋಟ :** ಮಹಾತ್ಮ ಪ್ರೊ, ಬಿ.ಕೃಷ್ಣಪ್ಪ ಸ್ಥಾಪಿತ. ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾಸಂಘಟನಾಸಂಚಾಲಕರಾಗಿ ಯಮನಪ್ಪ.ಪಿ ಭಜಂತ್ರಿ ಇವರನ್ನು ಆಯ್ಕೆ ಮಾಡಿದ್ದಾರೆಂದು ಸಮಿತಿಯ ಜಿಲ್ಲಾ ಸಂಚಾಲಕರಾದ ಯಮನಪ್ಪ.ಸಿ ಹಲಗಿ ತಿಳಿಸಿದ್ದಾರೆ. ಮಹಾತ್ಮ ಪ್ರೊ, ಬಿ.ಕೃಷ್ಣಪ್ಪ ಸ್ಥಾಪಿತ ಸಮಿತಿಯ ಸಕ್ರೀಯ ಕ್ರೀಯಾಶೀಲ ಕಾರ್ಯಕರ್ತರಾಗಿ ಸುದೀರ್ಘ ಇಪ್ಪತ್ತೈದು ವರ್ಷಗಳ ಕಾಲ ನಿರಂತರವಾಗಿ ನೇರ & ವಸ್ತು ನಿಷ್ಠುರ ತನ್ನ ಬದ್ಧತೆ ಹಾಗೂ ಸಾಂಘಿಕ ಸೈದ್ಧಾಂತಿಕ ಮತ್ತು ತಾತ್ವಿಕ ನೆಲೆಗಟ್ಟಿನ ಮೇಲೆ ಬೆಳೆದ ಸಂಘಟನೆಯ ಮುಂಚೂಣಿ



ಕಾರ್ಯಕರ್ತರಾಗಿ ವಿವಿಧ ಹಂತದ ಪದಾಧಿಕಾರಿಯಾಗಿ ಜಿಲ್ಲಾಸಂಘಟನಾಸಂಚಾಲಕರಾಗಿ ನಿಯುಕ್ತಿ ಆಗಿರುವುದು ಅತ್ಯಂತ ವೈಶಿಷ್ಟ್ಯಗಳಲ್ಲಿ ಇದೊಂದು ವಿಶೇಷ ಅನ್ನುವುದರಲ್ಲಿ ಅತಿಶಯೋಕ್ತಿ ಎರಡು ಮಾತಿಲ್ಲ ಇಂತಹ ಒಬ್ಬ ಗಟ್ಸ್ ನಾಯಕನ ಅವಶ್ಯಕತೆ ಸಂಘಟನೆಗೆ ಇದೆ. ಇವರನ್ನು ಈ ಕೂಡಲೇ ಜಿಲ್ಲೆಯ ಜಿಲ್ಲಾ ಸಂಘಟನಾ ಸಂಚಾಲಕರಾಗಿ ಆಯ್ಕೆ ಮಾಡಿ ಆದೇಶಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆಗೆ ಜಿಲ್ಲಾ ಸಂಚಾಲಕರಾದ ಯಮನಪ್ಪ. ಸಿ.ಹಲಗಿ. ತಿಳಿಸಿದ್ದಾರೆ ಎಂದು ವರದಿಯಾಗಿದೆ.

# ಮಕ್ಕಳ ಉಜ್ವಲ ಭವಿಷ್ಯಕ್ಕೆ ಎಲ್ಲರ ಸಹಕಾರ ಅಗತ್ಯ: ಸಂತೋಷ ಚವ್ಹಾಣ



**ಇಂಡಿ :** 'ಶಾಲೆಗಳು ಮಕ್ಕಳಲ್ಲಿ ಮೌಲ್ಯ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಮಕ್ಕಳ ಕಲಿಕೆಯಲ್ಲಿ ಶಿಕ್ಷಕರೊಂದಿಗೆ ಪಾಲಕರು ಕೈಜೋಡಿಸಿದಾಗ ಮಾತ್ರ ಮಗು ಉತ್ತಮ ಶಿಕ್ಷಣ ಪಡೆಯಲು ಸಾಧ್ಯ' ಎಂದು ಹಿರೇರೂಗಿ ಕನ್ನಡ ಕ್ಲಸ್ಟರ್ ಸಿ ಆರ್ ಪಿ ಸಂತೋಷ ಚವ್ಹಾಣ ತಿಳಿಸಿದರು.

ಶುಕ್ರವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ 2025–26 ನೇ ಸಾಲಿನ ಶಾಲಾ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಪಾಲಕರು ತಮ್ಮ ಮಕ್ಕಳನ್ನು ಸರಿಯಾಗಿ ಶಾಲೆಗೆ ಕಳುಹಿಸಬೇಕು.ಶಾಲೆಯಲ್ಲಿಸಿಗುವಎಲ್ಲಸೌಲಭ್ಯಗಳನ್ನು ಮಕ್ಕಳು ಸದುಪಯೋಗಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳ ಬದುಕು ಉಜ್ವಲವಾಗಿ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಎಲ್ಲರ ಸಹಕಾರ ಅಗತ್ಯ ಎಂದರು.

ಶಿಕ್ಷಕರಾದ ಸಂತೋಷ ಬಂಡೆ, ಎಸ್ ಆರ್ ಚಾಳೇಕರ ಶಾಲೆಯ ಸವಲತ್ತುಗಳು, ಇಲಾಖೆಯ ಯೋಜನೆಗಳ ಕುರಿತು ವಿವರಿಸಿದರು.

ಶಾಲೆಗೆ ಆಗಮಿಸಿದ ಮಕ್ಕಳಿಗೆ ಆರತಿ ಬೆಳಗಿ ಹಣೆಗೆ ತಿಲಕವಿಟ್ಟು ಗುಲಾಬಿ ಹೂವು ನೀಡಿ ಶಿಕ್ಷಕರೇ ಬರಮಾಡಿಕೊಳ್ಳುವ ಮೂಲಕ ವಿಶಿಷ್ಟವಾಗಿ ಶಾಲಾ ಪ್ರಾರಂಭೋತ್ಸವ ಆಚರಿಸಲಾಯಿತು.

ಎಸ್ ಡಿ ಎಮ್ ಸಿ ಉಪಾಧ್ಯಕ್ಷ ರಮೇಶ ಮಠಪತಿ, ಮುಖ್ಯ ಶಿಕ್ಷಕರಾದ ಅನಿಲ ಪತಂಗಿ, ವ್ಹಿ ವೈ ಪತ್ತಾರ, ಎಸ್ ಎಸ್ ಅರಬ ಹಾಗೂ ಶಿಕ್ಷಕರಾದ ಎಸ್ ಎಂ ಪಂಚಮುಖಿ, ಶಾಂತೇಶ ಹಳಗುಣಕಿ, ಸುರೇಶ ದೊಡ್ಯಾಳಕರ, ಜೆ ಎಂ ಪತಂಗಿ, ಸಾವಿತ್ರಿ ಸಂಗಮದ, ಎಸ್ ಎನ್ ಡಂಗಿ, ಎಸ್ ಬಿ ಕುಲಕರ್ಣಿ, ಎಸ್ ಡಿ ಬಿರಾದಾರ, ಎಫ್ ಎ ಹೊರ್ತಿ, ಎಸ್ ವ್ಹಿ ಬೇನೂರ, ಸುಮಿತ್ರಾ ನಂದಗೊಂಡ, ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ ಸೇರಿದಂತೆ ಅನೇಕ ಪಾಲಕರು, ಮಕ್ಕಳು ಭಾಗವಹಿಸಿದ್ದರು.

# ಗ್ರಾಮಗಳ ಅಭಿವೃದ್ಧಿಗೆ ಸದಾ ಬದ್ಧ: ಶಾಸಕ ಸವದಿ



**ಬನಹಟ್ಟಿ :** ತೇರದಾಳ ಮತಕ್ಷೇತ್ರದ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ತಾನು ಸದಾ ಬದ್ಧನಾಗಿದ್ದು, ಶೋಷಿತ ಮತ್ತು ಹಿಂದುಳಿದ ಸಮುದಾಯಗಳ ಬಗ್ಗೆ ಕಾಳಜಿ ವಹಿಸಿರುವ ನೆಮ್ಮದಿ ತನಗಿದೆ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಅವರು ಇತ್ತೀಚೆಗೆ ಸಮೀಪದ ನಾವಲಗಿ ಗ್ರಾಮದಲ್ಲಿ ಕೆಪಿಎಸ್ ಶಾಲೆಯ ಕಟ್ಟಡ ಕಾಮಗಾರಿಗೆ ರೂ. 62 ಲಕ್ಷ ಹಾಗೂ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ರೂ. ಹತ್ತು ಲಕ್ಷ ವೆಚ್ಚದ ಕಟ್ಟಡ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಸರ್ಕಾರದ ಕಾಮಗಾರಿಗಳನ್ನು ಪ್ರಾಮಾಣಿಕವಾಗಿ ನಡೆಸುವುದರ ಮೂಲಕ ಗುಣಮಟ್ಟದ ಕಾಮಗಾರಿಗೆ ಗುತ್ತಿಗೆದಾರರು ಮತ್ತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಗಮನ ನೀಡಬೇಕು. ಗ್ರಾಮೀಣ ಪ್ರದೇಶದಲ್ಲಿ ಶೈಕ್ಷಣಿಕ ಅಭಿವೃದ್ಧಿಗಾಗಿ ಹೆಚ್ಚು ಒತ್ತು ನೀಡಲಾಗುತ್ತಿದೆ. ಸಮುದಾಯ ಭವನಗಳು ಗ್ರಾಮದ ಅಭಿವೃದ್ಧಿಗೆ ಸಹಕಾರ ನೀಡಲಿ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಖಾ ಕಾಂತಿ, ಹಣಮಂತ ಮಗದುಮ, ಮಲ್ಲಪ್ಪ ಗಣಿ, ಗುರು ಮರಡಿಮಠ, ಭಾಗೀರಥಿ ಮಗದುಮ್, ಮುತ್ತಪ್ಪ ಅಂಗಡಿ, ಸದಾಶಿವ ಸವದಿ, ಬಸವರಾಜ ಗಣಿ, ಈರಪ್ಪ ಕಡಕಬಾವಿ, ಗಂಗಪ್ಪ ಅಮ್ಮಲಜೇರಿ, ಸಿದ್ದು ಕಂಚು, ಹಣಮಂತ ನಾವಿ, ಗದಿಗೆಪ್ಪ ಹಳ್ಳಿ ಸೇರಿದಂತೆ ಇನ್ನೂ ಅನೇಕರು ಪಾಲ್ಗೊಂಡಿದ್ದರು.

# ಒಗ್ಗಟ್ಟಿನ ಮಂತ್ರ ಸಾರುವ ತಿರಂಗ ಯಾತ್ರೆ

**ಇಂಡಿ:**ತಿರಂಗಯಾತ್ರೆಇದುಸರ್ವಧರ್ಮದಸರ್ವಜಾತಿಗಳ ಸಮಸ್ತ ಭಾರತೀಯರ ಜಾತ್ರೆ, ತಿರಂಗಯಾತ್ರೆ ಉದ್ದೇಶ ಪಾಪಿ ಪಾಕಿಸ್ಥಾನಿ ಉಗ್ರರು ಭಾರತ ದೇಶದ ಮೇಲೆ ಹಾಗೂ ಮುಗ್ಧ ಭಾರತೀಯ ಪ್ರವಾಸಿಗರ ಮೇಲೆ ಧಾಳಿ ಮಾಡಿ ಅಟ್ಟಹಾಸದಿಂದ ಮೇರೆದಿರುವ ಪಾಕಿಸ್ಥಾನಿಗಳ ವಿರುದ್ಧ ಭಯೋತ್ಪಾದಕರಿಗೆ ಸಮಸ್ತ ಭಾರತೀಯರ ಒಗ್ಗಟಿನ ಮಂತ್ರ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಇಡೀ ದೇಶವ್ಯಾಪಿ ತಿರಂಗಯಾತ್ರೆ ನಡೆದಿದೆ ಪ್ರಧಾನ ಮಂತ್ರಿ ನರೇಂದ್ರಮೋದಿ ವಿಶ್ವದಜನಮನ್ನಣೆಪಡೆದುಕೊಂಡಿದ್ದಾರೆ. ಇಂದು ನರೇಂದ್ರ ಮೋದಿಜೀ ಸೈನಿಕರಿಗೆ

ಆತ್ಮಸ್ಥೈರ್ಯ ತುಂಬಿದ್ದಾರೆ. ಭಾರತದ ಪ್ರವಾಸಿಗರ ಮೇಲೆ ನಡೇದಿದ ಧಾಳಿ ಪ್ರತಿಕಾರ ಆಪರೇಶನ್ ಸಿಂಧೂರ ಪಾಕಿಸ್ಥಾನಕ್ಕೆನಡುಗ ಹುಟ್ಟಿಸಿದೆ, ಹಿಂದಿನಗಿಂತ ಇಂದು ನಮ್ಮ ಸೈನಿಕ ಶಕ್ತಿ ಯುದ್ಧ ತಂತ್ರಜ್ಞಾನ ಇಮ್ಮಡಿಗೊಂಡಿದೆ ಇದಕ್ಕೇಲ್ಲ ಪ್ರಧಾನಿ ಮೋದಿಜೀ ಕಾರಣ ದೇಶದಲ್ಲಿ ತಿರಂಗಯಾತ್ರೆಹಸಿವು ,ನೀರಡಿಕೆ ,ನಿದ್ರೆ, ಮಳೆ ಯೋಚನೆ ಮಾಡದೆ ನಮ್ಮ ವೀರ ಯೋಧರಿಗೆ ತಿರಂಗಯಾತ್ರೆಯ ಮೂಲಕ ಶಕ್ತಿ ತುಂಬುವ ಕೆಲಸ ನಡೆದಿದೆ. ಸೈನಿಕರ ಜೊತೆ ಇಡೀ ದೇಶ ಇದೆ ಎಂಬ



ಮೂಲಮಂತ್ರವಾಗಿದೆ. ಉಗ್ರರ ವಿರುದ್ಧ ನಮ್ಮ ಸೈನಿಕರ ರಕ್ತ ಕುದಿಯುತ್ತಿದೆ ಉಗ್ರರು ಮಾಡುತ್ತಿರುವ ಕುತಂತ್ರ ಅಟ್ಟಹಾಸ ವಿರುದ್ಧ ಇಂದು ನಾವೇಲ್ಲರೂ ಭಾರತೀಯರು ಯುದ್ದಕ್ಕೂ ಸನ್ನದಾರುವ ಪ್ರಸಂಗ ಬಂದಿದೆ ಪಾಕಿಸ್ಥಾನ ಇಂದಿಗೂ ಎಂದೇಂದಿಗೂ ಕುತಂತ್ರ ದೇಶವಾಗಿದೆ ಭಾರತೀಯರಾದ ನಾವು ಎಚ್ಚರಿಕೆಯಿಂದ ಇರಬೇಕು , ದೇಶ ಉಳಿದರೆ ನಾವು ದೇಶ ಇಲ್ಲದಿದ್ದರೆ ನಾವಿಲ್ಲ ದೇಶಕ್ಕಾಗಿ ಯಾವ ತ್ಯಾಗಕ್ಕೂ ಸಿದ್ಧ ಎಂದರು.

ಬಿಜೆಪಿ ಮುಖಂಡ ಕಾಸುಗೌಡ ಬಿರಾದಾರ, ಶೀಲವಂತ ಉಮರಾಣಿ,ಅನೀಲಗೌಡ ಬಿರಾದಾರ,ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕೀವುಡೆ, ಬಿ.ಡಿ ಪಾಟೀಲ, ದೇವೇಂದ್ರ ಕುಂಬಾರ ಮಾತನಾಡಿದರು.

ಶಿರಶ್ಯಾಡ ಶ್ರೀಮಠದ ಅಭಿನವ ಮರುಘೇಂದ್ರ ಶಿವಾಚಾರ್ಯರು ದೇಶದ ಸಾರ್ವಭೌಮತೆ ಐಕ್ಯತೆ ಕುರಿತು ದಿವ್ಯಸಾನಿಧ್ಯವಹಿಸಿ ಆರ್ಶೀವಚನ ನೀಡಿದರು. ತಡವಲಗಾ ರಾಚೋಟೇಶ್ವರ ಶಿವಾಚಾರ್ಯರು , ನಾದ ಕೆ.ಡಿ ಗ್ರಾಮದ ಶಿವಾನಂದ ಶಿವಾಚಾರ್ಯ, ಆಲಮೇಲದ ಚಂದ್ರಶೇಖರ ಶಿವಾಚಾರ್ಯ ಸಾನಿಧ್ಯವಹಿಸಿದರು.

ಶೀಲವಂತ ಉಮರಾಣಿ, ಅನೀಲ ಜಮಾದಾರ, ರಾಮಸಿಂಗ ,ಕನ್ನೊಳ್ಳಿ , ಬಾಳು ಮುಳಜಿ, ಎಸ್ ಎಂ ಬಿರಾದಾರ, ಸೋಮು ನಿಂಬರಗಿಮಠ, ಪ್ರಸಾದ ಏಳಗಿ, ಸಿದ್ದು ಡಂಗಾ ಸೇರಿದಂತೆ ಬಿಜೆಪಿ ಮುಖಂಡರು ಕಾರ್ಯಕರ್ತರು ಇದ್ದರು.

# ವಚನ ಗುಮ್ಮಟದಂತೆ ಜ್ಞಾನಗುಮ್ಮಟ ನಿರ್ಮಿಸಿದ ಶ್ರೇಯಸ್ಸು ಎಕ್ಸಲಂಟ್‌ಗೆ ಸಲ್ಲುತ್ತದೆ: ಸಂಗಮೇಶ ಬಬಲೇಶ್ವರ

**ವಿಜಯಪುರ :** ಆದಿಲ್ ಶಾಹಿಗಳು ಕಟ್ಟಿದ ಗೋಳಗುಮ್ಮಟ, ಫ.ಗು ಹಳಕಟ್ಟಿಯವರು ಕಟ್ಟಿದ ವಚನ ಗುಮ್ಮಟದ ಮಧ್ಯದಲ್ಲಿ ಬಸವರಾಜ್ ಕೌಲಗಿಯವರು ಕಟ್ಟಿದ ಜ್ಞಾನಗುಮ್ಮಟವು ನಮ್ಮ ಮಕ್ಕಳ ಉಜ್ವಲ ಭವಿಷ್ಯನ್ನು ನಿರ್ಮಾಣ ಮಾಡುವುದಕ್ಕೆ ನೆರವಾಗುತ್ತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ. ಮಕ್ಕಳಲ್ಲಿ ಅಡಗಿರುವ ಅಪರಿಮಿತ ಜ್ಞಾನದ ಭಂಡಾರವನ್ನು ಹೆಕ್ಕಿ ಹೊರಗೆಳೆದು ನಾಡಿಗೆ ನೀಡುವುದರ ಜೊತೆಗೆ ನಮ್ಮ ಮಕ್ಕಳು ಸಾಧನೆಯ ಪಥದಲ್ಲಿ ಹೆಜ್ಜೆ ಹಾಕುವಂತೆ ಮಾಡಬೇಕು ಎನ್ನುವ ಕಾರಣಕ್ಕೆ ನಿರ್ಮಾಣ ಮಾಡಿದ ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆ ಇಂದು ರ್‍ಯಾಂಕ್‌ಗಳ ಮೇಲೆ ರ್‍ಯಾಂಕ್ ನೀಡುವುದರ ಮೂಲಕ ನಾಡಿನ ಮನೆ ಮಾತಾಗಿದೆ ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ನಗರದ ಕಿತ್ತೂರು ರಾಣಿ ಚನ್ನಮ್ಮ ಮಂಗಲ ಕಾರ್ಯಾಲಯದಲ್ಲಿಎಕ್ಸಲಂಟ್‌ಕೋಚಿಂಗ್ ಕ್ಲಾಸಿಸ್ ವತಿಯಿಂದ ಆಯೋಜಿಸಲಾಗಿದ್ದ ಸೈನಿಕ, ನವೋದಯ, ಕಿತ್ತೂರು ಹಾಗೂ ರಾಷ್ಟ್ರೀಯ ಮಿಲಿಟರಿ ಶಾಲೆಗಳ ಪರೀಕ್ಷೆಯಲ್ಲಿ ಯಶಸ್ಸು ಗಳಿಸಿದ ಸಾಧಕ ವಿದ್ಯಾರ್ಥಿಗಳ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು; ಎಕ್ಸಲಂಟ್ ಶಿಕ್ಷಣ ಸಂಸ್ಥೆಯೂ ಸಂಸ್ಕಾರಯುತ ಶಿಕ್ಷಣದ ಜೊತೆಗೆ ಮಕ್ಕಳಲ್ಲಿ ಮೌಲ್ಯ ಬಿತ್ತುವ ಕಾರ್ಯ ಮಾಡುತ್ತಿದ್ದಾರೆ. ಜಾಹಿರಾತಿಗಾಗಿ ಹಣ ಖರ್ಚು ಮಾಡದೇ ಗುಣಮಟ್ಟದ ಶಿಕ್ಷಣದ ಮೂಲಕವಾಗಿಯೇ ತಮ್ಮತನವನ್ನು ಸಾಬೀತು ಮಾಡಿದ್ದಾರೆ. ಆ




ಕಾರಣದಿಂದಾಗಿಯೇ ಕರ್ನಾಟಕದ ಮೂಲೆ ಮೂಲೆಗಳಿಂದ ಪಾಲಕರು ತಮ್ಮ ಮಕ್ಕಳನ್ನು ತರಬೇತಿಗಾಗಿ ಇಲ್ಲಿಗೆ ಕರೆದುಕೊಂಡು ಬರುತ್ತಾರೆ. ಅವರ ನಿರೀಕ್ಷೆಯನ್ನು ಯಾವತ್ತೂ ಹುಸಿಗೊಳಿಸದ ಎಕ್ಸಲಂಟ್ ಸಂಸ್ಥೆ ಪ್ರತಿ ವರ್ಷವೂ ಅತ್ಯುತ್ತಮವಾದ ಫಲಿತಾಂಶವನ್ನು ನೀಡುತ್ತಾ ಬಂದಿದೆ. ಈ ಬಾರಿಯಂತೂ ಯಾರೂ ಕೂಡ ಊಹಿಸದ ರೀತಿಯಲ್ಲಿ ಫಲಿತಾಂಶ ನೀಡಿದ್ದು ಮನಸ್ಸಿಗೆ ಖುಷಿ ನೀಡುತ್ತಿದೆ.

ಒಂದು ಕಾರ್ಯಕ್ರಮದಲ್ಲಿ ಒಂದೇ ವೇದಿಕೆ ಮೇಲೆ ನೂರಾರು ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನ ಮಾಡುತ್ತಿರುವುದು ನನ್ನ ಬದುಕಿನಲ್ಲಿ ಇದೇ ಮೊದಲು. ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷನಾಗಿ ನಾನು ಈ ಕ್ಷಣಕ್ಕೆ ಸಾಕ್ಷಿಯಾಗಿದ್ದು ನನ್ನ ಪುಣ್ಯ ಎಂದು ಹರ್ಷ ವ್ಯಕ್ತ ಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷ ಬಸವರಾಜ್ ಕೌಲಗಿ; ಪ್ರತಿ ಬಾರಿಯೂ ಉತ್ತಮವಾದ ಫಲಿತಾಂಶವನ್ನು ಒದಗಿಸುವಲ್ಲಿ ಸಫಲವಾಗಿರುವ ನಮ್ಮ ಸಂಸ್ಥೆಯು ಈ ಬಾರಿ ಸೈನಿಕ, ನವೋದಯ, ಕಿತ್ತೂರು ಹಾಗೂ ರಾಷ್ಟ್ರೀಯ ಮಿಲಿಟರಿ ಶಾಲೆಗಳ ಪರೀಕ್ಷೆಯಲ್ಲಿ ಅದ್ಭುತ ಫಲಿತಾಂಶವನ್ನು ನೀಡಿದೆ. ಅದರಲ್ಲೂ ಸೈನಿಕ ಶಾಲೆಯ ಪರೀಕ್ಷೆಯಲ್ಲಿ ರಾಜ್ಯದ ಟಾಪ್ ಹತ್ತು ರ್‍ಯಾಂಕ್‌ಗಳಲ್ಲಿ ನಮ್ಮ ನಾಲ್ಕು ವಿದ್ಯಾರ್ಥಿಗಳಿರುವುದು ನಮ್ಮ ಸಂಸ್ಥೆಯ ಗುಣಮಟ್ಟದ ತರಬೇತಿಗೆ ಸಾಕ್ಷಿ ನೀಡುತ್ತದೆ. ಎಕ್ಸಲಂಟ್ ವಿಜ್ಞಾನ ಕಾಲೇಜಿನಲ್ಲೂ ರಾಜ್ಯಕ್ಕೆ ನಾಲ್ಕು ರ್‍ಯಾಂಕ್ ದೊರೆತಿದ್ದು ಈ ವರ್ಷ ರ್‍ಯಾಂಕ್‌ಗಳು ಹಬ್ಬದ ವಾತಾವರಣವನ್ನುಂಟು ಮಾಡಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಯನ್ನು ಮಾಡುವುದಕ್ಕೆ ಸಿದ್ಧರಾಗಿದ್ದು; ನಮ್ಮ ಬೋಧಕ ವರ್ಗ ಇನ್ನೂ ಹೆಚ್ಚಿನ ರ್‍ಯಾಂಕ್‌ಗಳನ್ನು ನೀಡುವುದಕ್ಕೆ ಕಟಿಬದ್ಧವಾಗಿ ನಿಂತಿದ್ದು; ನಮ್ಮ ಮೇಲೆ ಭರವಸೆ ಇಟ್ಟು ತರಬೇತಿಗೆ ಕಳುಹಿಸುವ ಪಾಲಕರಿಗೂ ಸಹ ನಾವು ಚಿರಋಣಿ ಎಂದು ಹೇಳಿದರು.

ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಗೌರವ ಸದಸ್ಯ ರಾಜಶೇಖರ ಕೌಲಗಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಡೀ ವರ್ಷಗಳವರಗೂ ನಡೆದ ಪರೀಕ್ಷೆಗಳಲ್ಲಿ ಸಂಸ್ಥೆಯು ಪಡೆದುಕೊಂಡ ಫಲಿತಾಂಶದ ಸಮಗ್ರ ಮಾಹಿತಿಯನ್ನು ನೀಡಿದರು. ಹೆಚ್–ಎಂಟಿಯ ನಿವೃತ್ತ ಅಧ್ಯಕ್ಷ ಪಿ.ಎಸ್ ಬಗಲಿ, ನಿವೃತ್ತ ಸೇನಾಧಿಕಾರಿ ಪಿ.ಎಸ್. ಚವ್ಹಾಣ, ಆರ್ಕೆಂಎಂ ಆಸ್ಪತ್ರೆಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ. ಬಸವರಾಜ ವ್ಹಿ ಮೊಹಿತೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ಎಕ್ಸಲಂಟ್ ಕೋಚಿಂಗ್ ವಿಭಾಗದ ಆಢಳಿತಾಧಿಕಾರಿ ಉಮಾ ಶಾಬಾದಿ, ಕಲ್ಯಾಣರಾವ್ ಕುಲಕರ್ಣಿ, ವಿಶ್ವಕರ್ಮ ದೊಡ್ಡಪತ್ತಾರ ಶೈಕ್ಷಣಿಕ ಸಂಯೋಜಕ ಮುರುಗೇಶ ಹಗದಪ್ಪನವರ, ವಿವೇಕಾನಂದ ಪೊದ್ದಾರ, ಹೇಮಂತ ಆರ್. ನಾಯಕ್ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂಧಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸೈನಿಕ ಶಾಲಾ ಪ್ರವೇಶ ಪರೀಕ್ಷೆಯಲ್ಲಿಅತೀ ಹೆಚ್ಚು ಅಂಕ ಪಡೆದ 80 ವಿದ್ಯಾರ್ಥಿಗಳು ಸೇರಿದಂತೆ ಆರೆಂ–ಎಸ್, ನವೋದಯ, ಕಿತ್ತೂರು ಶಾಲೆಗೆ ಆಯ್ಕೆಯಾದ ವಿದ್ಯಾರ್ಥಿಗಳು ಹಾಗೂ 120 ಬೋಧಕ ಹಾಗೂ 50ಜನ ಬೋಧಕೇತರ ಸಿಬ್ಬಂಧಿಗಳನ್ನು ಸನ್ಮಾನಿಸಲಾಯಿತು.

ಗಣಿತ, ಐಕ್ಯೂ, ಸಾಮಾನ್ಯಜ್ಞಾನ ವಿಷಯಗಳಲ್ಲಿನೂರು ಪ್ರತಿಷತ ಅಂಕಗಳನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದ ಶಿಕ್ಷಕರಿಗೆ ಕಾರ್ಯಕ್ರಮದಲ್ಲಿ 1 ಲಕ್ಷ ರೂಪಾಯಿಗಳ ಬಹುಮಾನ ವಿತರಿಸಲಾಯಿತು.

# ಮಾಹಿತಿ ಹಕ್ಕು ಅಧಿನಿಯಮ ಕುರಿತು ಕೊಪ್ಪಳ ವಿ.ವಿ.ಯಿಂದ ಒಂದು ದಿನದ ಕಾರ್ಯಾಗಾರ
## ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆ-ರುದ್ರಣ್ಣ ಹರ್ತಿಕೋಟೆ

**ಕೊಪ್ಪಳ :** ಮಾಹಿತಿ ಹಕ್ಕು ಅಧಿನಿಯಮ ಕಾಯ್ದೆಯ ಬಗ್ಗೆ ಸಾರ್ವಜನಿಕರಿಗೆ ಸರಿಯಾದ ಅರಿವನ್ನು ಮೂಡಿಸುವುದು ಅತ್ಯವಶ್ಯಕವಾಗಿದ್ದು, ಈ ಕುರಿತು ಬರುವ ದಿನಗಳಲ್ಲಿ ಕರ್ನಾಟಕ ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆಗಳನ್ನು ಆಯೋಗದಿಂದ ಮಾಡಲಾಗುತ್ತಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಹೇಳಿದರು.

ಅವರು ಶನಿವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಮಾಹಿತಿ ಹಕ್ಕು ಅಧಿನಿಯಮ-2005ರ ಕುರಿತು ಕೊಪ್ಪಳ ವಿಶ್ವವಿದ್ಯಾಲಯದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಪ್ರಜಾಪ್ರಭುತ್ವ ಪ್ರಬಲವಾಗಬೇಕು. ಜನರಿಗೆ ಸರ್ಕಾರದ ಮಹಿತಿ ಲಭ್ಯವಾಗಬೇಕು ಎಂಬ ಉದ್ದೇಶದಿಂದ ಅಂದಿನ ಪ್ರಧಾನಿ ಡಾ.ಮನಮೋಹನ ಸಿಂಗ್ ನೇತೃತ್ವದ ಸರ್ಕಾರವು 2005ರ ಅಕ್ಟೋಬರ್ 5 ರಂದು ಆರ್.ಟಿ.ಐ ಕಾಯ್ದೆಯನ್ನು ಜಾರಿಗೆಗೊಳಿಸಿತು. ಈ ಕಾಯ್ದೆಯನ್ನು ಜಾರಿ ತಂದ ಮೊಟ್ಟ ಮೊದಲ ರಾಜ್ಯ ಕರ್ನಾಟಕವಾಗಿದೆ. ಆರ್.ಟಿ.ಐ ಕಾಯ್ದೆ ಬಗ್ಗೆ ಸಾರ್ವಜನಿಕ-ರಿಗೆ ಸರಿಯಾದ ಅರಿವನ್ನು ಮೂಡಿಸಲು ಕರ್ನಾಟಕ ಮಾಹಿತಿ ಆಯೋಗವನ್ನು ಜನರ ಬಳಿ ಕೊಂಡೊಯ್ಯುವ ಚಿಂತನೆಗಳನ್ನು ಮಾಡಲಾಗುತ್ತಿದೆ. ಇದರ ಜೊತೆಗೆ ಸಾರ್ವಜನಿಕ ಮಾಹಿತಿ ಅಧಿಕಾ-ರಿಗಳಿಗೆ ಕಾನೂನು ಅರಿವು ಮೂಡಿಸಲಾಗುತ್ತಿದೆ. ಶಿಕ್ಷಣ ಹಂತದಲ್ಲಿಯೇ ಮಕ್ಕಳಿಗೂ ಆರ್.ಟಿ.ಐ ಕಾಯ್ದೆಯ ಕುರಿತು ಅರಿವನ್ನು ಮೂಡಿಸುವಂತಹ ಕೆಲಸವಾಗಬೇಕಿದೆ. ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಶಿಕ್ಷಣ ಇಲಾಖೆಯೊಂದಿಗೆ ಚರ್ಚಿಸಲಾಗಿದೆ. ಕಾಯ್ದೆ ಬಗ್ಗೆ ಎಲ್ಲರಲ್ಲಿಯೂ ಸ್ಪಷ್ಟ ಮಾಹಿತಿ ಇದ್ದಾಗ ಮಾತ್ರ ಅದು ಪರಿಣಾಮಕಾ-ರಿಯಾಗಿ ಅನುಷ್ಠಾನವಾಗಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಮಟ್ಟದಲ್ಲಿಯೂ ಸಾರ್ವಜನಿಕರ ಅಹವಾಲು ಸಭೆಗಳನ್ನು ಮಾಡುವ ಪ್ರಯತ್ನ ನಡೆಯುತ್ತಿದೆ. ಸಚಿವರು, ಶಾಸಕರುಗಳ ಅಧ್ಯಕ್ಷತೆಯಲ್ಲಿ ನಡೆಯುವ ಕೆಡಿಪಿ ಸಭೆಗಳಲ್ಲಿಯೂ ಆರ್.ಟಿ.ಐ ಕಾಯ್ದೆಯ ಅನುಷ್ಠಾನದ ಬಗ್ಗೆ ಚರ್ಚೆಗಳಾಗಬೇಕೆಂದು ರಾಜ್ಯ ಮಾಹಿತಿ ಆಯೋಗವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ಡಾ.ಹರೀಶ್ ಕುಮಾರ್ ಅವರು ಮಾತನಾಡಿ, ಹಿಂದಿನ ಕಾಲದ ರಾಜರ ಆಳ್ವಿಕೆಯ ಕಾಲದಲ್ಲಿ ಜನರು ಪ್ರಶ್ನೆ ಮಾಡುವದಾಗಲಿ ಅಥವಾ ಅವರನ್ನು ನೋಡುವ ಹಾಗೆ ಇರಲಿಲ್ಲ. ದೊಡ್ಡ ಸಮಾರಂಭಗಳಂತಹ ಸಂದರ್ಭದಲ್ಲಿ ಅವರ ಮುಖ ನೋಡಬೇಕಿತ್ತು. ಆದ-ರೆ ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹಾಗಿಲ್ಲ. ಈ ದೇಶದ ರಾಷ್ಟ್ರಪತಿಯಿಂದ ಹಿಡಿದು. ಆಗರ್ಭ ಶ್ರೀ ಮಂತ ಹಾಗೂ ಒಬ್ಬ ಬಡವನಿಗೂ ಒಂದೇ ಮತ ನೀಡುವದರ ಜೊತೆಗೆ ನಮ್ಮ ಸಂವಿಧಾನದಲ್ಲಿ ಎಲ್ಲರಿಗೂ ಸಮಾನ ಹಕ್ಕುಗಳನ್ನು ನೀಡಿದೆ ಎಂದರು.

ದೇಶದ ಶಾಸಕಾಂಗ ಕಾರ್ಯಾಂಗ ಮತ್ತು ನ್ಯಾಯಾಂಗ ವ್ಯವಸ್ಥೆ ದಾರಿತಪ್ಪಿದಾಗ ಅಂತಿಮ ನಿರ್ಣಾಯಕರು ಜನರೆ ಆಗಿರುತ್ತಾರೆ. ಜನರೆ ತಂದ ಕಾಯ್ದೆ ಕಾನೂನುಗಳ ಪಾಲಕರು ಅವರೆ ಆಗಿದ್ದಾರೆ.

ಮಾಹಿತಿ ಹಕ್ಕು ಕಾಯಿದೆಗೆ ಜಗತ್ತಿನಲ್ಲಿ 300 ವರ್ಷಗಳ ಇತಿಹಾಸ ಇದೆ. ಜಗತ್ತಿನ 112 ರಾಷ್ಟ್ರಗಳು ಇದನ್ನು ಒಪ್ಪಿಕೊಂಡಿವೆ. ಮೊದಲು ಸ್ವೀಡನ್. ಕೊಲಂಬಿಯಾ. ಯು-ಎಸ್ಎ, ಕೆನಡಾ, ಜಪಾನ್ ಹೀಗೆ ಜಗತ್ತಿನ ಇತರೆ ಹಲವಾರು ರಾಷ್ಟ್ರಗಳು ಈ ನಿಯಮಗಳನ್ನು ಪಾಲನೆ ಮಾಡುತ್ತಿವೆ ರಾಜಸ್ಥಾನದಲ್ಲಿ ನಡೆದ ಸಮಾಜಿಕ ಚಳುವಳಿಗಾರರ ಪ್ರತಿಫಲವಾಗಿ ಮಾಹಿತಿ ಹಕ್ಕು ಕಾಯ್ದೆ 2005 ನ್ನು ನಮ್ಮ ದೇಶದಲ್ಲಿ ಜಾರಿಗೆ ಬಂದಿತು. ಇದನ್ನು ನಮ್ಮ ದೇಶದಲ್ಲಿ ಮೊದಲ ಬಾರಿಗೆ ಜಾರಿಗೆ ತಂದ ರಾಜ್ಯ




ಕರ್ನಾಟಕ ಆಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ಬರುವ ಮುಂಚೆ ಬಲಾಢ್ಯರು ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿದ್ದರು. ಈಗ ಹಾಗಿಲ್ಲ. ಜನ ಸಾಮಾನ್ಯರು ಮಾಹಿತಿ ಹಕ್ಕುಗಳ ಮೂಲಕ ಸರ್ಕಾರದ ಲಾಭವನ್ನು ಪಡೆಯುತ್ತಿದ್ದಾರೆ. ಮಾಹಿತಿ ಆಯೋಗದ ಹೆಚ್ಚಿನ ಸದುಪಯೋಗವನ್ನು ಸಾರ್ವಜನಿಕರು ಪಡೆಯುವ ಮೂಲಕ ಪ್ರಜಾಪ್ರಭುತ್ವ ಹಾಗೂ ಸಂವಿಧಾನದವನ್ನು ಇನಷ್ಟು ಗಟ್ಟಿಗೊಳಿಸಬೇಕೆಂದು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ್ ಎಸ್. ಅವರು ಮಾತನಾಡಿ, ದೇಶದಲ್ಲಿ ಮೊದಲು ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರು, ಶಾಸಕರು, ವಿಧಾನಪ-ರಿಷತ್ ಸದಸ್ಯರು ಸೇರಿದಂತೆ ಕೆಲವೆ ಕೆಲವು ಚಾನಾಯಿತ ಜನಪ್ರತಿನಿಧಿಗಳು ಹಾಗೂ ಉನ್ನತ ಅಧಿಕಾರಿಗಳಿಗೆ ಮಾತ್ರ ಮಾಹಿತಿ ಸಿಗುತ್ತಿತ್ತು. 2005ರಲ್ಲಿ ಡಾ.ಮನಮೋಹನ ಸಿಂಗ್ ರವರ ಸರ್ಕಾರವು ಆರ್.ಟಿ.ಐ ಕಾಯ್ದೆಯನ್ನು ಜಾರಿಗೆ ತಂದ ನಂತರ ಈ ದೇಶದ ಜನ ಸಾಮನ್ಯ-ರಿಗೂ ಮಾಹಿತಿ ಸಿಗುತ್ತಿದೆ. ಇಂದಿನ ವಿದ್ಯಾರ್ಥಿಗಳು ಮುಂದಿನ ಭವಿಷ್ಯದ ಪ್ರಜೆಗಳಾಗಿದ್ದು, ಮಾಹಿತಿ ಹಕ್ಕು ಅಧಿನಿಯಮ-2005ರ ಕುರಿತು ಹೆಚ್ಚಿನ ರೀತಿಯಲ್ಲಿ ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ವಿದ್ಯಾರ್ಥಿಗಳಿ ಕಿವಿ ಮಾತು ಹೇಳಿದರು.

ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಅವರು ಮಾತನಾಡಿ, ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಮಾಹಿತಿ ಪ್ರಾಧಿಕಾರಗಳು ಕರ್ನಾಟಕ ಮಾಹಿತಿ ಆಯೋಗದ ವ್ಯಾಪ್ತಿಗೊಳಪಡುತ್ತವೆ. ರಾಜ್ಯ ಮಾಹಿತಿ ಆಯೋಗವು ಕೇಂದ್ರ ಮಾಹಿತಿ ಆಯೋಗದ ಸ್ವರೂಪದಲ್ಲಿ ರಚನೆಯಾಗಿದೆ. ನಮ್ಮ ರಾಜ್ಯದಲ್ಲಿ ಹತ್ತು ಮಾಹಿತಿ ಆಯುಕ್ತರಿದ್ದು, ಒಬ್ಬರು ಮುಖ್ಯ ಆಯುಕ್ತರಿದ್ದಾರೆ. ಬೆಂಗಳೂ-ರಿನಲ್ಲಿ ಎಂಟು ಪೀಠಗಳಿವೆ ಹಾಗೂ ಬೆಳಗಾವಿ ಮತ್ತು ಕಲಬುರಗಿಯಲ್ಲಿ ತಲಾಒಂದು ಪೀಠಗಳಿವೆ. ಮಾಹಿತಿ ಹಕ್ಕು ಕಾಯ್ದೆಯಡಿ ಕರ್ನಾಟಕ ಮಾಹಿತಿ ಆಯೋಗಕ್ಕೆ ದ್ವಿತಿಯ ಮೇಲ್ಮನವಿಗಳು ಬಂದಾಗ, ಆ ಅರ್ಜಿಗಳನ್ನು ಸ್ವೀಕರಿಸಿ, ವಿಚಾರಣೆ ಮಾಡಲಾಗುತ್ತದೆ ಎಂದು ಹೇಳಿದರು.

ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಕೆ.ರವಿ ಅವರು ಕಾರ್ಯಾಗಾರದ ಅಧ್ಯಕ್ಷತೆ ಮತ್ತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಾಹಿತಿ ಹಕ್ಕಿನ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅವಶ್ಯಕತೆಯಿದೆ. ಮಾಹಿತಿ ಹಕ್ಕು ಅಧಿನಿಯಮ-2005ರ ಕುರಿತು ಕೊಪ್ಪಳ ವಿಶ್ವವಿದ್ಯಾಲಯದಿಂದ ಕಾರ್ಯಾಗಾರ ಹಮ್ಮಿಕೊಂಡಿರುವ ಈ ದಿನ ಒಂದು ವಿಶೇಷ ದಿನವೇ ಆಗಿದೆ. ಮೇ 31 ಇಂದು ರಾಜಮಾತೆ ಅಹಲ್ಯಬಾಯಿ ಹೋಳ್ಕರ್ ರವರ ಜನ್ಮ ದಿನವು ಆಗಿದೆ. ಮಧ್ಯ ಭಾರತವನ್ನು ಆಳಿದಂತಹ ಹೋಳ್ಕರ ರಾಜ್ಯ ಮನೆತನಕ್ಕೆ ಸೇ-ರಿದ ಅಹಲ್ಯಾಬಾಯಿ ಹೋಳ್ಕರ್, ಯುದ್ಧದಲ್ಲಿ ತನ್ನ ಗಂಡ ಮರಣ ಹೊಂದಿದ ನಂತರವೂ ಕುಗ್ಗದೆ, ಒರ್ವ ಹೆಣ್ಣಾಗಿ ತೊಟ್ಟಿಲು ತೂಗುವ ಕೈಯಿಂದ ಖಡ್ಗವನ್ನು ಹಿಡಿದು ಇಡೀ ಸಾಮ್ರಾಜ್ಯವನ್ನು ರಕ್ಷಣೆ ಮಾಡಿದಳು. ಇದಲ್ಲದೇ ದೇಶದ ಅನೇಕ ದೇವಾಲಯಗಳನ್ನು ಜೀರ್ಣೋದ್ಧಾರ ಮಾಡಿದ್ದಳು ಎಂದರು.

ಕೊಪ್ಪಳ ವಿಶ್ವವಿದ್ಯಾಲಯ ಜನ ಸಮುದಾಯಕ್ಕೆ ಹತ್ತಿರವಾಗಿರಬೇಕು. ಈ ದಿಶೆಯಲ್ಲಿ ಕೊಪ್ಪಳ ವಿವಿ.ಯಿಂದ ಅನೇಕ ವಿಚಾರ ಸಂಕೀರ್ಣ, ಕವಿಗೋಷ್ಠಿಗಳನ್ನು ಮಾಡಲಾಗುತ್ತಿದೆ. ಜನಸಮುದಾಯ ಬಂದು ವಿಶ್ವವಿದ್ಯಾಲಯದ ಚಟುವಟಿ-ಕೆಗಳಲ್ಲಿ ಪಾಲ್ಗೊಂಡಾಗ ಮಾತ್ರ ಯಾವುದೇ ಒಂದು ವಿಶ್ವವಿದ್ಯಾಲಯ ಅಭಿವೃದ್ಧಿಯಾಗುತ್ತದೆ. ಸಾಮಾಜಿಕ ಬದಲಾವಣೆ ಆಗಬೇಕಾದರೆ ಶೈಕ್ಷಣಿಕ ಕೇಂದ್ರಗಳು ಮತ್ತು ವಿಶ್ವವಿದ್ಯಾಲಯಗಳಿಂದ ಮಾತ್ರ ಸಾದ್ಯವಾಗಿದೆ. ಜಗಜ್ಯೋತಿ ಬಸವಣ್ಣನವರು ನಡೆದಾಡಿದಂತಹ ಪವಿತ್ರವಾದ ನಾಡು ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದಿಂದ ವಂಚಿತವಾಗುತ್ತಿರುವ ಹಲವಾರು ಹೆಣ್ಣು ಮಕ್ಕಳಿಗೆ ಶಿಕ್ಷಣದತ್ತ ಕೊಂಡೊಯ್ಯಲು ಹಾಗೂ ಬಾಲ್ಯವಿವಾಹ ನಿಷೇಧ ಮತ್ತು ಅಪೌಷ್ಠಿಕ ನಿವಾರಣೆಗಾಗಿ ಕೊಪ್ಪಳ ವಿಶ್ವವಿದ್ಯಾಲಯವು ಈ ನಿಟ್ಟಿನಲ್ಲಿ ಶ್ರಮಿಸುತ್ತಿದ್ದು, ಇದಕ್ಕಾಗಿ ಎಲ್ಲಾ ವಿದ್ಯಾರ್ಥಿಗಳು, ಶಿಕ್ಷಕರು ಕೈಜೋಡಿಸಬೇಕು ಎಂದು ಹೇಳಿದರು.

ಗಮನ ಸೆಳೆದ ಸಾಂಸ್ಕೃತಿ-ಕ ಕಾರ್ಯಕ್ರಮ: ಕಾರ್ಯಾಗಾರ ಪ್ರಾರಂಭಕ್ಕೂ ಪೂರ್ವದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ವಿದ್ಯಾರ್ಥಿಗಳಿಂದ ನಡೆದ ಡಾ. ಬಿ.ಆರ್.ಅಂಬೇಡ್ಕರ್ ಅವರ ಕುರಿತಾದ ಮತ್ತು ಸಂವಿಧಾನದ ಪ್ರಸ್ತಾಪನೆಯ ಜಾಗೃತಿ ಮೂಡಿಸುವ ಸಾಂಸ್ಕೃತಿ-ಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ ಅವರು ಭಾರತ ಸಂವಿಧಾನದ ಪ್ರಸ್ತಾವನೆಯನ್ನು ಎಲ್ಲರಿಗೆ ಭೋಧಿಸಿದರು. ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರು ಕಾರ್ಯಕ್ರಮದ ಕೊನೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ ಕುರಿತು ಸಾರ್ವಜನಿಕರೊಂದಿಗೆ ಸಂವಾದ ನಡೆಸಿದರು.

ಕಾರ್ಯಾಗಾರದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವರಾದ ಪ್ರೊ.ಕೆ.ವಿ.ಪ್ರಸಾದ್, ಗಂಗಾವತಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಮುಮ್ತಾಜ್ ಬೇಗಂ, ಯಲಬುರ್ಗಾ ಸ್ನಾತಕೋತ್ತರ ಕೇಂದ್ರದ ಆಡಳಿತಾಧಿಕಾರಿ ಕೆ.ಎಚ್.ಛತ್ರದ, ಕೊಪ್ಪಳ ವಿಶ್ವ ವಿದ್ಯಾಲಯದ ಆಡಳಿತಾಧಿಕಾರಿ ತಿಮ್ಮಾರೆಡ್ಡಿ ಮೇಟಿ ಮತ್ತು ಸಿಂಡಿಕೇಟ್ ಹಾಗೂ ಆಕಾಡೆಮಿಕ್ ಕೌನ್ಸಿಲ್ ಸದಸ್ಯರು, ವಿಶ್ವ ವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿಗಳು, ಸಂಶೋಧನಾ ವಿದ್ಯಾರ್ಥಿಗಳು, ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.

---

## ಕೈಮಗ್ಗ & ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೊಮಾ: ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ :** 2025-26 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷಗಳ ಡಿಪ್ಲೊಮಾ (ಡಿ.ಹೆಚ್.ಟಿ.ಟಿ) ಕೋರ್ಸ್‌ಗಾಗಿ ಅರ್ಹ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ದಿನಾಂಕ:01-07-2025ಕ್ಕೆಅನ್ವಯಿಸುವಂತೆಸಾಮಾನ್ಯವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂಪರಿಶಿಷ್ಟಜಾತಿಮತ್ತುಪರಿಶಿಷ್ಟಪಂಗಡದಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢಿಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇ-ರಿಯಲ್ಲಿ 22, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) ನಲ್ಲಿ 12, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) ಯಲ್ಲಿ 03 ಹಾಗೂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) ನಲ್ಲಿ 0 2 ಸೀಟುಗಳು ಸೇರಿದಂತೆ ಒಟ್ಟು 39 ಸೀಟುಗಳು ಲಭ್ಯವಿದ್ದು, ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೊಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸೆಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ದೂರವಾಣಿ ಸಂ: 08372-259664, ಮೊಬೈಲ್ ಸಂಖ್ಯೆ: 9449162822 ಅಥ-ವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರುಗಳನ್ನು ಸಂಪರ್ಕಿಸಬಹುದು.

ಅರ್ಜಿಗಳನ್ನು https://khtigadag.ac.in/AdmissionForm.pdf ಮೂಲಕ ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು, ಪೂರ್ಣವಾಗಿಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ಇವರಿಗೆ ಜೂನ್ 15 ರೊಳಗೆ ಸಲ್ಲಿಸಬೇಕು ಎಂದು ಕೊಪ್ಪಳ ಜಿಲ್ಲಾ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಬಾಲ್ಯ ವಿವಾಹ ಹಾಗೂ ಪೋಕ್ಸೊ ಕಾಯ್ದೆಗಳ ಕುರಿತು ಜನ ಜಾಗೃತಿ ಮೂಡಿಸಿ: ಡಿಸಿ

**ವಿಜಯಪುರ :** ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರ ಸಹಯೋಗದೊಂದಿಗೆ ಬಾಲ್ಯವಿವಾಹ ಹಾಗೂ ಪೋಕ್ಸೊ ಕಾಯ್ದೆಗಳ ಕುರಿತು ಜನಜಾಗೃತಿಕಾರ್ಯಕ್ರಮಗಳನ್ನುಜಿಲ್ಲೆಯಲ್ಲಿ ಸಮರ್ಪಕವಾಗಿ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆಗಾಗಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯವಿವಾಹವನ್ನುತಡೆಗಟ್ಟಲುಪ್ರೌಢಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ಸಮಿತಿಗಳನ್ನು ರಚಿಸಿಕೊಂಡು, ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು. ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಶಾಲೆಗಳಲ್ಲಿ ಒಂದು ವಾರಗಳಿಂತ ಹೆಚ್ಚು ಗೈರಾದಮಕ್ಕಳಮಾಹಿತಿಗಳನ್ನುಶಾಲಾಶಿಕ್ಷಣ ಇಲಾಖೆಯ ಉಪನಿರ್ದೇಶಕರು ಖುದ್ದಾಗಿ ಶಾಲೆಗಳಿಗೆ ಭೇಟಿ ನೀಡುವುದರ ಮೂಲಕ ಸಮಗ್ರ ಮಾಹಿತಿ ಪಡೆದುಕೊಳ್ಳಬೇಕು. ಬಾಲ್ಯ ವಿವಾಹ ಘಟನೆ ಕಂಡುಬಂದಲ್ಲಿ ಅವುಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಬಾಲ್ಯ ವಿವಾಹ ಕಂಡುಬಂದಲ್ಲಿ ಬಾಲ್ಯ ವಿವಾಹಕ್ಕೆ ಪ್ರೋತ್ಸಾಹ ನೀಡುವವರೂ ಸೇರಿದಂತೆ ಮಗುವಿನ ಪೊ?ಷಕರು, ಮಗುವಿನ ಜವಾಬ್ದಾರಿಯನ್ನು ಹೊತ್ತವರ, ಭಾಗವಹಿಸಿದ ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಅವರು ನಿರ್ದೇಶನ ನೀಡಿದರು. ಬಾಲ್ಯ ವಿವಾಹ ಘಟಿಸದಂತೆ ನೋಡಿಕೊಳ್ಳಬೇಕು ಹಾಗೂ ಬಾಲ್ಯ ವಿವಾಹ ತಡೆಗೆ ಇರುವ ಸಹಾಯವಾಣಿ ಸಂಖ್ಯೆ 1098 ಬಗ್ಗೆ ವ್ಯಾಪಕ ಪ್ರಚಾರ ಮಾಡಬೇಕು ಹಾಗೂ ಬಾಲ್ಯ ವಿವಾಹ ಮುಕ್ತ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಅಂತಹ ಗ್ರಾಮ ಪಂಚಾಯತಿಗಳಿಗೆ ಸನ್ಮಾನಿಸುವ ಕಾರ್ಯ ನಡೆಯಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ತಿಳಿಸಿದರು.

ಬಾಣಂತಿ ಮತ್ತು ಗರ್ಭಿಣಿ ಮಹಿಳೆಯರ ಕ್ಷೇಮಾಭಿವೃದ್ಧಿಗಾಗಿ ಇರುವ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವುದರ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ಮತ್ತು ಪೊ?ಷಣೆಯನ್ನು ಉತ್ತಮಪಡಿಸಲು ಅನುವಾಗಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ತಿಳಿಸಿದರು.

ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ನೊಂದ ಮಹಿಳೆಯರಿಗಾಗಿ ಸ್ಥಾಪಿಸಲಾಗಿರುವ ಸಖಿ ಒನ್ ಸ್ಟಾಪ್ ಸೆಂಟರ್‌ನಲ್ಲಿ ನೊಂದ ಮಹಿಳೆಯರಿಗೆಆರೋಗ್ಯ,ಆರೈಕೆ,ಪೊಲೀಸ್ ಹಾಗೂ ಕಾನೂನು ನೆರವು, ವಸತಿ ಹಾಗೂ ಆಪ್ತ ಸಮಾಲೋಚನೆ ಇತ್ಯಾದಿ ಸೇವೆಗಳನ್ನು ಸಮರ್ಪಕವಾಗಿ ದೊರಕುವಂತೆ ಎಲ್ಲ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಅವರು ಸೂಚಿಸಿದರು.

ಕೌಟುಂಬಿಕ ದೌರ್ಜನ್ಯಕ್ಕೆ ಒಳಗಾದ ನೊಂದ ಮಹಿಳೆಯರಿಗಾಗಿ ಜಿಲ್ಲೆಯಲ್ಲಿ ಒಟ್ಟು 06 ಸಾಂತ್ವನ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ಕೇಂದ್ರಗಳಲ್ಲಿ ನೊಂದ ಮಹಿಳೆಯರಿಗೆ ಆಪ್ತ ಸಮಾಲೋಚನೆ, ಕಾನೂನುಅರಿವು,ನೆರವುನೀಡಲಾಗುವುದು. ಅಂತಹ ಮಹಿಳೆಯರಿಗೆ ಆತ್ಮ ಸ್ಥೈರ್ಯ ನೀಡಿ ಪುನಃ ಕುಟುಂಬದೊಂದಿಗೆ ಸೇರಿಸುವ ಕಾರ್ಯವಾಗಬೇಕು.

ಸಾಂತ್ವನ ಕೇಂದ್ರಗಳಲ್ಲಿ ಯಾವುದೇ ಸಮಸ್ಯೆಗಳಿದ್ದಲ್ಲಿ ಅಧಿಕಾರಿಗಳ ಗಮನಕ್ಕೆ ತಂದು ಇತ್ಯರ್ಥ ಪಡೆಸಿಕೊಳ್ಳುವಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳಾದ ರಿಷಿ ಆನಂದ ಅವರು ಸಾಂತ್ವನ ಕೇಂದ್ರಗಳ ವ್ಯವಸ್ಥಾಪಕರಿಗೆ ಸೂಚಿಸಿದರು.

ಪೋಕ್ಸೋ ಹಾಗೂ ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳಿಗೆ ಎಲ್ಲ ರೀತಿಯ ಸಹಾಯ ಸಹಕಾರವನ್ನು ಪೊಲೀಸ್ ಇಲಾಖೆ ವತಿಯಿಂದ ನೀಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಹೇಳಿದರು.

---

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಧರಣಿ ಸತ್ಯಾಗ್ರಹ

**ಮೂಡಲಗಿ :** ಸಮೀಪದ ಕೌಜಲಗಿಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಿವಿಧ ಬೇಡಿಕೆಗಳಿಗಾಗಿ ನಡೆಯುತ್ತಿರುವ ಧರಣಿ ಸತ್ಯಾಗ್ರಹಕ್ಕೆ ಬೆಂಬಲವಾಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಸಂವಿಧಾನಾತ್ಮಕ ಸತ್ಯಾಗ್ರಹಕ್ಕೆ ಎಲ್ಲಾ ಸಿಬ್ಬಂದಿ ಬಳಗ ಕಪ್ಪು ಪಟ್ಟಿ ಕಟ್ಟಿಕೊಂಡು ಸಾಂಕೇತಿಕ ಧರಣಿ ಸತ್ಯಾಗ್ರಹ ಕೈಗೊಂಡರು. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಾವಿರಾರು ನೌಕರರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸಂವಿಧಾನಾತ್ಮಕ ಹೋರಾಟಕ್ಕೆ ಕರೆ ಕೊಟ್ಟು ಗಾಳಿ, ಮಳೆ, ಚಳಿಯನ್ನು ಲೆಕ್ಕಿಸದೆ ಎಲ್ಲರ ಒಳತಿಗಾಗಿ ಹೋರಾಟವನ್ನು ಮಾಡಿದ್ದಾರೆ. ತಮ್ಮ ಸಂಪೂರ್ಣ ಜೀವನವನ್ನೇ ಮುಡಿಪಾಗಿಟ್ಟ ಅವರಿಗೆ ಕೆಲವು ಕನಿಷ್ಠ ಸರಕಾರಿ ಸೌಲಭ್ಯಗಳು ದೊರೆಯದೆ ಇದ್ದುದು ದುರ್ಭಾಗ್ಯವೇ ಸರಿ. ಕೆ.ಜಿ.ಆಯ್.ಡಿ., ಡಿ.ಸಿ.ಆರ್.ಜಿ ಹಾಗೂ ಇ.ಜಿ.ಆಯ್.ಎಸ್. ಜ್ಯೋತಿ ಸಂಜೀವಿನಿ, ಕುಮಾರ ನಾಯಕ್ ವಿಶೇಷ ಭತ್ಯೆ, ಹೆಚ್ಚುವರಿ ಕೆಲಸಕ್ಕೆ 10%ಹೆಚ್ಚುವರಿವೇತನ,ನಿವೃತ್ತಿಉಪಧಾನಮೊದಲಾದ ಸೌಲಭ್ಯಗಳು ಇಲ್ಲದೇ ಒಂದು ರೀತಿಯಲ್ಲಿ ದಿನಗೂಲಿ ನೌಕರರಂತೆ ಬದುಕಬೇಕಾದ ಅನಿವಾರ್ಯತೆ ಅವ-ರಿಗೆ ಬಂದೊದಗಿದೆ.

ನಾವು ಕೇಳಿರುವ ಕೆಲವೇ ಕೆಲವು ಬೇಡಿಕೆಗಳಾದ ನಿರ್ದೇಶನಾಲಯ, ಉಚಿತ ವಸತಿ ಗೃಹ ಸೌಲಭ್ಯ, 10% ವಿಶೇಷ ಭತ್ಯೆ,ಡಿ.ಸಿ.ಆರ್.ಜಿ. ಆರೋಗ್ಯ ಸೌಲಭ್ಯ, ಮರಣ ಮತ್ತು ನಿವೃತ್ತಿ ಉಪಾದಾನ ಈ ಸೌಲಭ್ಯಗಳನ್ನು ನೀಡಿ ನಮ್ಮನ್ನು ಗೌರವದಿಂದ ಬದುಕುವಂತೆ ಮಾಡಿ ಎಂದು ಬೇಡಿಕೆಗಳ ಮನವಿಯನ್ನು ಸರ್ಕಾರದ ಮುಂದೆ ಪ್ರಸ್ತುತ ಪಡಿಸಿದ್ದಾರೆ. ಈ ಸಂದರ್ಭದಲ್ಲಿ ಕೌಜಲಗಿಯ ವಸತಿ ಶಾಲೆಯ ಎಲ್ಲಾ ಸಿಬ್ಬಂದಿ ಹಾಜ-ರಿದ್ದರು.

---

# ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಮೂಡಲಗಿ :** 2025 ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ. 90 ಮತ್ತು 90 ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ರಾಜ್ಯ ನೌಕರರ ಸಂಘದ ತಾಲೂಕು ಅಧ್ಯಕ್ಷ ಆನಂದ ಹಂಜ್ಯಾಗೋಳ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ.

2025 ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳಲ್ಲಿ ಶೇ. 90 ಮತ್ತು 90 ಕ್ಕಿಂತ ಹೆಚ್ಚು ಅಂಕ ಗಳಿಸಿರುವ ರಾಜ್ಯ ಸರ್ಕಾರಿ ನೌಕರರ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ 2025 ಜೂನ 5 ರೊಳಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-22354783 /84, 9902135813 ಸಂಪರ್ಕಿಸಬೇಕೆಂದು ತಿಳಿಸಿದ್ದಾರೆ.

---

# ಕಾಯಕಯೋಗಿ ವೀರಣ್ಣ ಚರಂತಿಮಠ ಅವರ ಜನ್ಮದಿನಾಚರಣೆ
## ಹಣ್ಣು ಹಂಪಲ ವಿತರಣೆ: ರಕ್ತದಾನಮಾಡಿ ಸಸಿ ನಟ್ಟು ಸಂಭ್ರಮ

**ಬಾಗಲಕೋಟೆ :** ಕಾಯಕಯೋಗಿ ಡಾ.ವೀರಣ್ಣ ಚರಂತಿಮಠ ಅವರ ಜನ್ಮದಿನದ ಹಿನ್ನೆಲೆಯಲ್ಲಿ ಇಂದು ವಿವಿಧ ಮಹಾವಿದ್ಯಾಲಯದಲ್ಲಿರಕ್ತದಾನಮಾಡಿಸಸಿ ನಟ್ಟು, ಹಣ್ಣು ಹಂಪಲ ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

50ಕ್ಕೂಹೆಚ್ಚುಸಸಿ ನಟ್ಟುಸಂಭ್ರಮ: ವಿದ್ಯಾಗಿ-ರಿಯಲ್ಲಿರುವ ಬಿ.ವಿ.ವಿ.ಎಸ್. ಇನ್ಸಟ್ಯೂಟ್ ಆಫ್ ಮ್ಯಾನೇಜಮೆಂಟ್ ಸ್ಟಡಿ ಸಂಸ್ಥೆಯ ಆವರಣದಲ್ಲಿ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರ ಜನುಮದಿನದ ನಿಮಿತ್ಯ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷರಾದ ಗುರುಬಸವಸೂಳಿಬಾವಿಸಸಿನಟ್ಟುನಿರೂಣಿಸಿ ಮಾತನಾಡಿದ ಅವರು ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರು ಬಾಗಲಕೋಟೆಯನ್ನು ಮಾದರಿ ಶೈಕ್ಷಣಿಕ ನಗರವನ್ನಾಗಿಸುವ ಅವರ ದೂರದೃಷ್ಟಿ, ಅವರ ಎಲ್ಲ ಸೌಲಭ್ಯಗಳುಳಲ್ಲ ಕಲ್ಪನೆಯ ಬಾಗಲಕೋಟೆ ಇನ್ನು ಸಾಕಾರಗೊಳ್ಳಬೇಕಿದೆ, ಅವರ ಅಭಿವೃದ್ಧಿ ಪರ ಚಿಂತನೆಗೆ ನಾವೆಲ್ಲ ಕೈ ಜೋಡಿಸಬೇಕಿದೆ ಎಂದರು.





ಪದನಿಮಿತ್ಯ ಕಾರ್ಯದರ್ಶಿ ಡಾ.ಎಸ್. ಗಾಂವಕರ್. ಸಂಸ್ಥೆಯ ನಿರ್ದೇಶಕ ಡಾ.ಪ್ರಕಾಶ ವಡವಡಗಿ, ಬಿ.ಆರ್.ಪಾಟೀಲ ಸೇರಿದಂತೆ ಭೋಧಕ ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರಕ್ತದಾನ ಶಿಬಿರ: ಬಿ.ವಿ.ವಿ.ಎಸ್. ಹೋಮಿಯೋಪಥೀಕ್‌ವೈಧ್ಯಕೀಯ ಮಹಾ ವಿದ್ಯಾಲಯದಲ್ಲಿ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರ ಜನ್ಮದಿನದ ನಿಮಿತ್ಯ ರಕ್ತದಾನ ಶಿಬಿರ ಆಯೋಜಿಸಲಾಗಿ-ತ್ತು. ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಅವರು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ ದಾನಗಳಲ್ಲಿ ಶ್ರೇಷ್ಠದಾನ ರಕ್ತದಾನವಾಗಿದ್ದು, ರಕ್ತದ ಅವಶ್ಯವಿರುವ ವ್ಯಕ್ತಿಗಳಿಗೆ ರಕ್ತದಾನ ಮಾಡುವುದರ ಮೂಲಕ ಎಲ್ಲರೂ ಅಮೂಲ್ಯವಾದ ಜೀವ ರಕ್ಷಣೆಗೆ ಮುಂದಾಗಬೇಕು ಎಂದರು. ಪ್ರಾಚಾರ್ಯ ಡಾ.ಅರುಣಹೂಲಿ,ಹಾನಗಲ್ ಕುಮಾರೇಶ್ವರ ಆಸ್ಪತ್ರೆಯ ರಕ್ತ ಭಂಡಾರದ ವೈದ್ಯಾಧಿಕಾರಿ ಡಾ.ಕೇಶವ ಕುಲಕರ್ಣಿ,ಡಾ. ರವಿ ಕೋಟೆನ್ನವರ, ಡಾ.ಪವನ ಕುಲಕರ್ಣಿ,ಡಾ ಅಖಿಲಾ ಹುಲ್ಲೂರ,ಡಾ.ವಿ-ಜಯಲಕ್ಷ್ಮೀ ಪಾಟೀಲ,ಡಾ.ಅಮರೇಶ ಬಳಗಾನೂರ,ಡಾ.ಸುಧಿರ ಬೆಟಗೇರಿ, ಡಆ. ರುದ್ರೇಶ ಕೊಪ್ಪಲ,ಡಾ.ಮೇಘಾ ತಳವಾರ, ಡಾ.ಪೂಜಾ ಆಲಗೂರ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ರೋಗಿಗಳಿಗೆ ಹಣ್ಣು ಹಂಪಲ ವಿತರಣೆ:** ಬಿ.ವಿ.ವಿ.ಎಸ್.ಆಯುರ್ವೇದ ಮಹಾವಿದ್ಯಾಲಯದಿಂದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರ ಜನ್ಮದಿನದ ಅಂಗವಾಗಿ ಜಿಲ್ಲಾ ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲ್ ವಿತರಿಸಲಾಯಿತು, ಪ್ರಾಚಾರ್ಯ ಡಾ.ಎಂ.ಎಸ್.ಹಿರೇಮಠ. ಡಾ. ಆರ್.ಐ.ಜಂಬಗಿ, ಡಾ.ವಿ.ಎಸ್.ಚೌದರಿ, ಡಾ.ವಿ.ಎಸ್.ಹಿರೇಮಠ, ಡಾ. ಜಿ.ಎಸ್. ಕುಲಕರ್ಣಿ,ಡಾ.ಎಸ್.ಎಸ್ ಸಾರವಾಡ,ಡಾ. ಜೆ.ಪಿ.ಗಿರಿಸಾಗರ.ಡಾ.ವಾಯ್.ಎಸ್. ಕುಲಕರ್ಣಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

---

## ಅನಸೂಯಾ ರಾಮಚಂದ್ರ ಓದುಗೌಡರ ನಿಧನ




**ಮುಧೋಳ:** ಇಲ್ಲಿನ ಆನಂದನಗರ ನಿವಾಸಿ ಶ್ರೀಮತಿ ಅನುಸೂಯಾ ರಾಮಚಂದ್ರ ಓದುಗೌಡರ ತಮ್ಮ 62ನೆಯವಯಸ್ಸಿನಲ್ಲಿಮೇತಿಂಗಳ 31 ರಂದು ಹೃದಯಾಘಾತದಿಂದ ನಿಧನರಾದರು.

ಮೃತರು ಸಧ್ಯ ಧಾರವಾಡದಲ್ಲಿ ವಾಸಿಸುತ್ತಿದ್ದರು. ಅವರು ತಮ್ಮ ಹಿಂದೆ ಪತಿ , ಮೂವರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

---

## ಮಕ್ಕಳ ಸಾಹಿತಿ ಫ.ಗು. ಸಿದ್ದಾಪೂರಗೆ ಮಕ್ಕಳ ಸಾಹಿತ್ಯ ಭೂಷಣ ಪ್ರಶಸ್ತಿ



**ವಿಜಯಪುರ :** ಜಿಲ್ಲೆಯ ಸಿಂದಗಿ ಪಟ್ಟಣದ ವಿದ್ಯಾಚೇತನ ಪ್ರಕಾಶನವು ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ 60 ವರ್ಷ ಮೇಲ್ಪಟ್ಟ ಹಿರಿಯ ಸಾಹಿತಿಗೆ ರಾಜ್ಯಮಟ್ಟದ 'ಮಕ್ಕಳ ಸಾಹಿತ್ಯಭೂಷಣ' ಪ್ರಶಸ್ತಿ ನೀಡಿ ಗೌರವಿಸಲು ನಿರ್ಧ-ರಿಸಿದೆ. ಪ್ರಸಕ್ತ ವರ್ಷ 2025-26 ನೇ ಸಾಲಿನಲ್ಲಿ ಈ ಪ್ರಶಸ್ತಿಗೆ ವಿಜಯಪುರ ಜಿಲ್ಲೆಯ ಕೊಲ್ಹಾರ ತಾಲೂಕಿನ ಮುಳವಾಡ ಗ್ರಾಮದ ಖ್ಯಾತ ಮಕ್ಕಳ ಸಾಹಿತಿ ಫ.ಗು. ಸಿದ್ದಾಪುರ ಅವರು ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿ 15000 ರೂ. ನಗದು ಬಹುಮಾನದೊಂದಿಗೆ ಪ್ರಶಸ್ತಿ ಫಲಕ ಒಳಗೊಂಡಿದೆ. ಜೂ. 11 ರಂದು ಪಟ್ಟಣದ ಸಾರಂಗಮಠದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಶ್ರೀಯುತರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ವಿದ್ಯಾಚೇತನ ಪ್ರಕಾಶನದ ಪ್ರಕಾಶಕ, ಮಕ್ಕಳ ಸಾಹಿತಿ ಹ.ಮ. ಪೂಜಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕರಿಂದ ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ



**ಜಮಖಂಡಿ :** ತಾಲೂಕಿನ ರಾಜ್ಯ ಹೆದ್ದಾರಿ ಕಕಮರಿ ಖಾನಾಪೂರ ರಸ್ತೆಯಲ್ಲಿನ 26.60 ಕಿ.ಮಿ. ದಿಂದ 27.70 ಮತ್ತು 39.50 ರಿಂದ 45.80 ರ ವರೆಗಿನ ರಸ್ತೆ ಸುಧಾರಣೆ ಕಾಮಗಾರಿಗೆ ಶಾಸಕ ಜಗದೀಶ ಗುಡಗುಂಟಿ ಭೂಮಿ ಪೂಜೆ ನೆರವೇರಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿ.ಆರ್.ಐ.ಎಫ್.ಅನುದಾನದಲ್ಲಿ 5054 ಯೋಜನೆ ಅಡಿಯಲ್ಲಿ ಅಂದಾಜು 5.08 ಕೋಟಿ ವೆಚ್ಚದಲ್ಲಿ ರಸ್ತೆ ದುರಸ್ತಿ ಅಭಿವೃದ್ಧಿ ಕಾಮಗಾರಿ ನಡೆಯಲಿದೆ. ರಸ್ತೆಗಳು ಸುಧಾರಣೆಗೊಂಡರೆ ಅಪಘಾತಗಳ ಸಂಖ್ಯೆ ಕೂಡ ಕಡಿಮೆಯಾಗಲಿದೆ.

ಗುತ್ತಿಗೆದಾರರು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ನೀಡಿದರು.

ಮುಖಂಡರಾದ ನಾಗಪ್ಪ ಸನದಿ, ಅಜಯ ಕಡಪಟ್ಟಿ, ಮಲ್ಲು ದಾನಗೌಡ, ವಿಶ್ವಾಸ ಪಾಟೀಲ, ಗಣೇಶ ಸಿರಗಣ್ಣವರ, ಶಂಕರ ಕಾಳೆ, ಶ್ರೀಧರ ಕಂಬಿ, ಯಮನೂರ ಮೂಲಂಗಿ, ರಮೇಶ ಆಲಬಾಳ, ರಾಜೇಸಾಬ ಕಡಕೋಳ, ವಿನಾಯಕ ಗವಳಿ, ಶ್ರೀಶೈಲ ಗಡಾದ, ರೂಪಾ ಗೇವಾರಿ, ಸುಚಿತಾ ಭುತಡಾ, ಶಿವಪ್ಪ ಕಡಪಟ್ಟಿ, ಸುರೇಶಗೌಡ ಪಾಟೀಲ, ರಾಜುಗೌಡ, ಶಿವಾನಂದ ಪಾಟೀಲ, ಸಂತೋಷ ಬಡಗೇರ, ಕುಶಾಲ ವಾಗ್ಮೊರೆ, ಶಿವು ಸುತಾರ, ವಿನಾಯಕ ಪವಾರ, ಗೋವಿಂದ ಮೂಡಲಗಿ, ಸುನೀಲ ಭೋವಿ, ಸಿದ್ಧಲಿಂಗಯ್ಯ ಹಿರೇಮಠ, ಸಂತೋಷ ಮಾನೆ, ಪ್ರಥಮ ದರ್ಜೆ ಗುತ್ತಿಗೆದಾರ ಸಿ. ಕೆ. ಒಂಟಗೋಡಿ ಸಹಿತ ಹಲವರು ಉಪಸ್ಥಿತರಿದ್ದರು.

# ಆಧುನಿಕ ಜಗತ್ತು ಅವನತಿಯ ದಾರಿಯಲ್ಲಿ ಸಾಗುತ್ತಿದೆ: ನ್ಯಾಯವಾದಿ ಕಾಳೆ

**ಜಮಖಂಡಿ :** ಅಪರಾಧಗಳ ಸಂಖ್ಯೆಗಳು ಹೆಚ್ಚಾದರೆ ಕಾನೂನಿನ ಹಿಡಿತ ಹೆಚ್ಚಾಗಲಿದೆ. ಅನೈತಿಕ ಚಟುವಟಿಕೆಗಳಿಂದ ಅಪರಾಧಗಳ ಸಂಖ್ಯೆ ಕೂಡ ಹೆಚ್ಚಾಗುತ್ತಿದೆ. ಒತ್ತಡದ ಜೀವನ, ದುಶ್ಚಟಗಳನ್ನು ಆಹ್ವಾನಿಸುವ ಸಾಧ್ಯತೆಯಿದೆ ಎಂದು ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷ, ನ್ಯಾಯವಾದಿ ಶ್ರೀಶೈಲ ಕಾಳೆ ಹೇಳಿದರು.

ನಗರದ ಸರಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸಭಾ ಭವನದಲ್ಲಿ ಶನಿವಾರ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕು ಆರೋಗ್ಯ ಇಲಾಖೆ ಸಹಯೋಗದಲ್ಲಿ ಕಾನೂನು ನೆರವು ಅರಿವು ಮತ್ತು ವಿಶ್ವ ತಂಬಾಕು ನಿಷೇಧ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಭಕ್ತ ಕುಟುಂಬ ವ್ಯವಸ್ಥೆಯಿಂದ ಜೀವನ ಶೈಲಿಯಲ್ಲಿ ಬದಲಾವಣೆ ತರುತ್ತಿದೆ. ಹಿಂದಿನ-ಇಂದಿನ ಜೀವನ ಶೈಲಿ ವ್ಯವಸ್ಥೆ ಬದಲಾವಣೆಗೊಂಡಿದೆ. ಸಂಸ್ಕಾರ ಸಂಸ್ಕೃತಿ ಅರಿತು ರೂಢಿಸಿಕೊಂಡಲ್ಲಿ ನಾವು ಸುರಕ್ಷಿತರಾಗಿ ಜೀವನವನ್ನು ಸಾಗಿಸಬಹುದು. ಪ್ರತಿಯೊಬ್ಬರು ಕಾನೂನನ್ನು ಅರಿತುಕೊಂಡು ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗಲಿದೆ ಎಂದರು.



ಆಧುನಿಕ ಜಗತ್ತು ಅವನತಿಯ ದಾರಿಯಲ್ಲಿ ಸಾಗುತ್ತಿದೆ. ಶಿಕ್ಷಣವಂತ ಸಮಾಜ ನಿರ್ಮಾಣವಾದರೆ ಅಪರಾಧಗಳ ಸಂಖ್ಯೆ ಕಡಿಮೆಯಾಗಲಿದೆ. ಓರ್ವ ವ್ಯಸನಿ ಕುಟುಂಬದವರು ಆರ್ಥಿಕವಾಗಿ ತೊಂದರೆ ಅನುಭವಿಸುವ ಮೂಲಕ ಸಮಾಜ ಆ ಕುಟುಂಬವನ್ನು ಗೌರವಿಸುವದಿಲ್ಲ. ಇಂದಿನ ದಿನಮಾನದಲ್ಲಿ ದುಶ್ಚಟಗಳ ವಿರುದ್ಧ ಜಾಗೃತಿ ಮೂಡಿಸುವದು, ಅಭಿಯಾನ ಕೈಕೊಳ್ಳುವದು ಅಗತ್ಯವಾಗಿದೆ. ಪ್ರಕೃತಿ ನೀಡಿರುವ ಶರೀರವನ್ನು ನಾವೆಲ್ಲರೂ ಉತ್ತಮ ರೀತಿಯಲ್ಲಿ ಕಾಪಾಡಿಕೊಳ್ಳಬೇಕಾಗಿದೆ ಎಂದರು.

ಜೆ.ಎಂ.ಎಫ್.ಸಿ. ನ್ಯಾಯಾಲಯ ಮತ್ತು ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶ್ರೀದೇವಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ವೇದಿಕೆಯಲ್ಲಿ ತಾಲೂಕು ಸಾರ್ವಜನಿಕ ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ. ವಿ. ಸಿ. ಮುದಿಗೌಡರ, ಸಂಪನ್ಮೂಲವ್ಯಕ್ತಿ ಎನ್.ಸಿ.ಡಿ. ವೈದ್ಯಾಧಿಕಾರಿ ಡಾ. ಸ್ಮಿತಾ ಗಿರೆಗೋಳ ಹಾಜರಿದ್ದರು.ಲಕ್ಷ್ಮಿ ಮುಧೋಳ ಪ್ರಾರ್ಥಿಸಿದರು.ರವಿಕಾಂಬಳೆಸ್ವಾಗತಿಸಿದರು. ಡಾ. ಉಮೇಶ ಜೋಶಿ ನಿರೂಪಿಸಿದರು. ಮಲ್ಲು ಅಸ್ಕಿ ವಂದಿಸಿದರು. ಸ್ಥಳೀಯ ಬಿ.ಎಲ್.ಡಿ.ಇ. ಸಂಸ್ಥೆಯ ಅರವತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಕಪ್ಪುಚುಕ್ಕೆ ಇಲ್ಲದೆ ಸಂಭ್ರಮದಿಂದ ಬಕ್ರೀದ್ ಆಚರಿಸಿ: ಸಿಪಿಐ ಮಡ್ಡಿ

**ಜಮಖಂಡಿ :** ಭಾವ್ಯಕ್ಯತೆಯಿಂದ ಕೂಡಿರುವ ಜಮಖಂಡಿ ತಾಲೂಕಿನ ಎಲ್ಲ ಧರ್ಮದ ಜಾತ್ರೆ, ಹಬ್ಬ, ಉರುಸುಗಳು ಯಾವುದೇ ಕಪ್ಪುಚುಕ್ಕೆ ಇಲ್ಲದೇ ಸಂಭ್ರಮ ಸಡಗರದಿಂದ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರದು ಸಹಕಾರ ಅಗತ್ಯವಾಗಿದೆ ಎಂದು ಸಿಪಿಐ ಮಲ್ಲಪ್ಪ ಮಡ್ಡಿ ಹೇಳಿದರು.



ನಗರದ ಶಹರ ಪೊಲೀಸ್ ಠಾಣೆಯಲ್ಲಿ ಬಕ್ರೀದ ಮತ್ತು ಅಬೂಬಕರ ಉರುಸು ಪ್ರಯುಕ್ತ ಹಮ್ಮಿಕೊಂಡಿದ್ದ ಶಾಂತಿ ಪಾಲನಾ ಸಭೆಯಲ್ಲಿ ಅವರು ಮಾತನಾಡಿದರು.

ಬಕ್ರೀದ ಮತ್ತು ಅಬೂಬಕರ ಉರುಸು ನಡೆಯುತ್ತಿರುವ ಹಿನ್ನೆಲೆಯಲ್ಲಿ ಹಿಂದು-ಮುಸ್ಲಿಂ ಬಾಂಧವರು ಹಬ್ಬವನ್ನು ಸಂಭ್ರಮದಿಂದ ಆಚರಿಸಬೇಕು. ಪ್ರತಿಯೊಬ್ಬರು ಕಾನೂನು ಪಾಲಿಸುವ ಮೂಲಕ ಕಾನೂನಿಗೆ ಗೌರವ ನೀಡಬೇಕು. ಯಾವುದೇ ವದಂತಿಗಳಿಗೆ ಕಿವಿಕೊಡಬಾರದು ಎಂದರು.

ವೇದಿಕೆಯಲ್ಲಿ ಡಿ.ವೈ.ಎಸ್.ಪಿ. ರೋಶನ್ ಜಮೀರ, ಶಹರ ಪೊಲೀಸ್ ಠಾಣೆ ಪಿ.ಎಸ್.ಐ. ಅನೀಲ ಕುಂಬಾರ, ಗ್ರಾಮೀಣ ಪೊಲೀಸ್ ಠಾಣೆ ಪಿ.ಎಸ್.ಐ. ಗಂಗಪ್ಪ ಪೂಜಾರಿ ಸಹಿತ ಹಲವರು ಭಾಗವಹಿಸಿದ್ದರು.

# ಕಾರ್ಖಾನೆಗಳ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಬಹುಮುಖ್ಯ: ರಾಮನಗೌಡ ಪಾಟೀಲ

**ಮಹಾಲಿಂಗಪುರ :** ಪ್ರತಿಯೊಂದು ಕಾರ್ಖಾನೆಗಳ ಅಭಿವೃದ್ಧಿಯಲ್ಲಿ ಅಲ್ಲಿ ಕೆಲಸ ಮಾಡುವ ಪ್ರತಿಯೊಬ್ಬ ಕಾರ್ಮಿಕರ ಶ್ರಮವು ಬಹಳ ಮುಖ್ಯವಾಗಿರುತ್ತದೆ ಎಂದು ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ರಾಮನಗೌಡ ಪಾಟೀಲ ಹೇಳಿದರು.

ರವಿವಾರ ಸಮೀಪದ ಸೈದಾಪೂರದ ಸಮೀರವಾಡಿಯ ಸಕ್ಕರೆ ಕಾರ್ಖಾನೆಯ ಮಜ್ದೂರ್ ಯುನಿಯನ್ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಮಿಕ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಾರ್ಖಾನೆ ಯಶಸ್ವಿಯಾಗಿ ನಡೆಯಬೇಕಾದರೆ ಮಾಲೀಕರು, ರೈತರು,

ಕಾರ್ಮಿಕರ ನಡುವೆ ಹೊಂದಾಣಿಕೆ, ಸೌಹಾರ್ದತೆ ಬಹಳ ಮುಖ್ಯ.

ಕಾರ್ಮಿಕರ ಸಂಘಟನೆ ಎಂದರೆ ಸಾಮಾನ್ಯವಾಗಿ ಮಾಲೀಕರು ಮತ್ತು ಆಡಳಿತ ಮಂಡಳಿಯ ವಿರುದ್ಧದ ಸಂಘಟನೆಯಾಗಿರುತ್ತದೆ. ಕಾರ್ಮಿಕರು ಒಗ್ಗಟ್ಟಾಗಿದ್ದು ನಮ್ಮ ಸಂಘದ ಸದಸ್ಯರಿಗೆ ನ್ಯಾಯಯುತ ಬೇಡಿಕೆಗಳ ಪೂರೈಕೆಗಾಗಿ ಶ್ರಮಿಸಬೇಕು. 52 ವರ್ಷಗಳ ಗೋದಾವರಿ ಕಾರ್ಖಾನೆಯು ಕಾರ್ಮಿಕರ ಹಿತವನ್ನು ಕಾಯ್ದುಕೊಂಡು ಬರುತ್ತಿದೆ. ಮಾಲೀಕರು, ರೈತರು, ಕಾರ್ಮಿಕರು ಒಂದೇ ಕುಟುಂಬದ ಸದಸ್ಯರಂತಿದ್ದಾಗ ಮಾತ್ರ ಎಲ್ಲರಿಗೂ ಲಾಭವಾಗಲು ಸಾಧ್ಯ ಎಂದರು.




ರಾಜ್ಯ ಸಕ್ಕರೆ ಕಾರ್ಮಿಕರ ಮಹಾಮಂಡಳದ ಅಧ್ಯಕ್ಷ ಬಿ. ನಾಗರಾಜ ಮಾತನಾಡಿ ಕಾರ್ಮಿಕ ಇಲಾಖೆಯ ನಿಯಮಾವಳಿಯಂತೆ ಕಾರ್ಮಿಕರಿಗೆ ಉತ್ತಮ ವೇತನ ನೀಡುತ್ತಿರುವ ರಾಜ್ಯದ ಕೆಲವೇ ಕಾರ್ಖಾನೆಗಳಲ್ಲಿ ಸಮೀರವಾಡಿ ಕಾರ್ಖಾನೆಯೂ ಒಂದಾಗಿದ್ದು,

ಕಾರ್ಮಿಕರಿಗೆ ಎಂಟನೇ ವೇತನ ಆಯೋಗದ ಜಾರಿಗಾಗಿ ಪ್ರಯತ್ನಿಸಲಾಗುತ್ತಿದೆ. ಕಾರ್ಮಿಕರು ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಸದಾ ಒಗ್ಗಟ್ಟಿನಿಂದ ಇರಬೇಕು ಎಂದರು.

ಬಾಗಲಕೋಟೆ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ ಮಾತನಾಡಿ ಕಾರ್ಮಿಕ ಇಲಾಖೆಯಿಂದ ಕಾರ್ಮಿಕರಿಗೆ ಇರುವ ಸರ್ಕಾರಿ ಸೌಲಭ್ಯಗಳು ಮತ್ತು ಅದರ ಸದುಪಯೋಗದಕುರಿತುಮಾತನಾಡಿದರು.

ಕಬ್ಬು ಬೆಳೆಗಾರರ ಸಂಘದ ಕಾರ್ಯದರ್ಶಿ ರಂಗನಗೌಡ ಪಾಟೀಲ, ಕಾರ್ಖಾನೆಯ ಜನರಲ್ ಮ್ಯಾನೇಜರ್ ಎಂ. ರಾಮಚಂದ್ರ ಅಧ್ಯಕ್ಷತೆವಹಿಸಿದ್ದಮಜ್ದೂರ್‌ಯೂನಿಯನ್ ಕಾರ್ಯಾಧ್ಯಕ್ಷ ಬಿ. ವ್ಹಿ. ಮೇಲಪ್ಪಗೋಳ ಮಾತನಾಡಿದರು.

ಡಿಸ್ಟಿಲರಿ ವಿಭಾಗದ ಯುನಿಯನ್ ಅಧ್ಯಕ್ಷ ಬಸವರಾಜ ಭದ್ರಶೆಟ್ಟಿ, ಅಸ್ಲಂ ಪೆಂಢಾರಿ, ಸುರೇಶ ಬಾರಡ್ಡಿ, ಹನಮಂತ ಒಂಟಗೋಡಿ, ಆಯ್. ಜಿ. ಪಾಟೀಲ ಅತಿಥಿಗಳಾಗಿ ಭಾಗವಹಿಸಿದ್ದರು.

ಮಜ್ದೂರ್ ಯುನಿಯನ್ ಉಪಾಧ್ಯಕ್ಷ ಕೆ. ಬಿ. ವಾಜಂತ್ರಿ, ಕೋಶಾಧಿಕಾರಿ ವ್ಹಿ. ಎಸ್. ಕಮತೆ ಸೇರಿದಂತೆ ನೂರಾರು ಕಾರ್ಮಿಕರು ಪಾಲ್ಗೊಂಡಿದ್ದರು.

ಎನ್. ಪಿ. ಮಾಳಿ ಸ್ವಾಗತಿಸಿದರು. ಎಸ್. ಬಿ. ಬಿರಾದಾರ ಪಾಟೀಲ ಸೊಗಸಾಗಿ ನಿರೂಪಿಸಿದರು. ಸಿ. ಎಂ. ಅಥಣಿ ವಂದಿಸಿದರು.

# ಕಾಂಗ್ರೆಸ್ ಬಡವರ, ದೀನ ದಲಿತರ ವಿರೋಧಿ ಸರ್ಕಾರ

**ರಬಕವಿ-ಬನಹಟ್ಟಿ :** ಇಡೀ ವಿಶ್ವವೇ ಪ್ರಧಾನಿ ನರೇಂದ್ರ ಮೋದಿಯವರ ಕುರಿತು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದು, ಆದರೆ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಬಿಜೆಪಿಯ ಕೇಂದ್ರ ಸರ್ಕಾರ ದೇಶದ ಬಡವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಜಾರಿಗೆ ತಂದ ಜನೌಷಧ ಕೇಂದ್ರಗಳನ್ನು ನರೇಂದ್ರ ಮೋದಿಯವರ ಭಾವ ಚಿತ್ರಕ್ಕಾಗಿ ಇರುವ ಕಾರಣಕ್ಕೆ ಅವುಗಳನ್ನು ತೆರವುಗೊಳಿಸುತ್ತಿರುವುದು ಖಂಡನೀಯವಾಗಿದೆ. ಕಾಂಗ್ರೆಸ್ ಪಕ್ಷ ಬಡವರ ಮತ್ತು ದೀನ ದಲಿತರ ವಿರೋಧಿ ಸರ್ಕಾರವಾಗಿದೆ ಎಂದು ಶಾಸಕ ಸಿದ್ದು ಸವದಿ ಆಕ್ರೋಶ ವ್ಯಕ್ತಪಡಿಸಿದರು.




ಅವರು ಶನಿವಾರ ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಜನೌಷಧ ಕೇಂದ್ರಗಳನ್ನು ತೆರವುಗೊಳಿಸಿರುವುದನ್ನು ಖಂಡಿಸಿ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಮಾತನಾಡಿದರು.

ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಇಂದಿರಾ ಕ್ಯಾಂಟಿನ್ ಕಟ್ಟಡವನ್ನು ನಿರ್ಮಾಣ ಮಾಡಿದ್ದು, ಮುಂಭಾಗದಲ್ಲಿ ಇಂದಿರಾ ಗಾಂಧಿ ಭಾವಚಿತ್ರವನ್ನು ಪ್ರದರ್ಶನ ಮಾಡಲಿಕ್ಕೆ ಮಾತ್ರ ಎನ್ನುವಂತಾಗಿದೆ. ಆದರೆ ಕ್ಯಾಂಟಿನ್ ಮಾತ್ರ ಇನ್ನೂ ಆರಂಭವಾಗಿಲ್ಲ. ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಪೂರ್ಣ ಪ್ರಮಾಣದ ಔಷಧಗಳು ದೊರೆಯುತ್ತಿಲ್ಲ.

ಅಲ್ಲಿಯ ವೈದ್ಯರು ಔಷಧಗಳನ್ನು ಹೊರಗಿನಿಂದ ಖರೀದಿಸಿ ತರುವಂತೆ ತಿಳಿಸುತ್ತಿದ್ದಾರೆ.

ಆದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಕಡಿಮೆ ಬೆಲೆಗೆ ದೊರೆಯುತ್ತಿರುವ ಜನೌಷಧ ಕೇಂದ್ರಗಳನ್ನು ತೆರವುಗೊಳಿಸುವ ಮೂಲಕ ದ್ವೇಷದ ರಾಜಕಾರಣ ಕಾಂಗ್ರೆಸ್ ಮಾಡುತ್ತಿದೆ.

ಕಾಂಗ್ರೆಸ್ ಪಾಲಿಗೆ ಸಿದ್ಧರಾಮಯ್ಯ ಶಕುನಿ: ತಮ್ಮ ರಾಜಕೀಯ ನಿವೃತ್ತಿಯಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾಂಗ್ರೆಸ್ ಪಕ್ಷಕ್ಕೆ ಶಕುನಿಯಾಗಿದ್ದಾರೆ. ತಮ್ಮ ಅಧಿಕಾರ ಅವಧಿಯ ನಂತರ ಕಾಂಗ್ರೆಸ್ ಪಕ್ಷ ನಾಶವಾಗುವಂತೆ ಎಲ್ಲ ರೀತಿಯ ಧೋರಣೆಗಳನ್ನು ಅನುಸರಿಸುತ್ತಿದ್ದಾರೆ ಎಂದು ಸವದಿ ತಿಳಿಸಿದರು.

ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ, ಉಪಾಧ್ಯಕ್ಷೆ ದೀಪಾ ಗಾಡಿವಡ್ಡರ, ಸ್ಥಾಯಿ ಸಮಿತಿ ಕಾರ್ಯಾಧ್ಯಕ್ಷ ಅರುಣ ಬುದ್ನಿ, ಶ್ರೀಶೈಲ ಬೀಳಗಿ, ಸಂಜಯ ತೆಗ್ಗಿ, ಯಲ್ಲಪ್ಪ ಕಟಗಿ, ಧರೆಪ್ಪ ಉಳ್ಳಾಗಡ್ಡಿ, ಪಾಂಡುರಂಗ ಸಾಲ್ಗುಡೆ, ಶಿವಾನಂದ ಗಾಯಕವಾಡ, ಶ್ರೀಶೈಲ ಯಾದವಾಡ, ಗೋವಿಂದ ಡಾಗಾ, ಭುಜಬಲಿ ವೆಂಕಟಾಪುರ, ಶಂಕರ ಪಾಲಬಾಂವಿ, ಅಶೋಕ ರಾವಳ, ಈರಣ್ಣ ಚಿಂಚಖಂಡಿ, ಮಹಾವೀರ ಕೊಕಟನೂರ, ಸಚಿನ್ ಕೊಡತೆ, ಶಂಕರಗೌಡ ಪಾಟೀಲ, ಚನ್ನಪ್ಪ ಪಟ್ಟಣಶೆಟ್ಟಿ, ಗೌರಿ ಮಿಳ್ಳಿ, ಜಯಶ್ರೀ ಬಾಗೇವಾಡಿ, ಸವಿತಾ ಹೊಸೂರ, ದುರ್ಗವ್ವ ಹರಿಜನ ಸೇರಿದಂತೆ ತೇರದಾಳ ಮತಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು.

# ಪೊಲೀಸರಿಗೆ ಹೆಲ್ಮೆಟ್ ವಿತರಣೆ



**ರಬಕವಿ-ಬನಹಟ್ಟಿ :** ಪ್ರಮುಖ ವೃತ್ತಗಳಲ್ಲಿ ಸಂಚಾರ ಪೊಲೀಸ್ ಹಾಗು ನಿತ್ಯ ಸೇವೆಯಲ್ಲಿ ವಾಹನ ಬಳಕೆಯೊಂದಿಗೆ ಸಂಚರಿಸುವ ಪೊಲೀಸರಿಗೆ ಹೆಲ್ಮೆಟ್ ವಿತರಣೆ ನಡೆಯಿತು.

ಬನಹಟ್ಟಿಯ ಅಸ್ಕಿ ಏಜೆನ್ಸಿಯಿಂದ ಮತ್ತು ಆಶೀರ್ವಾದ ಪೈಪ್ ವತಿಯಿಂದ ನೂರಕ್ಕೂ ಹೆಚ್ಚು ಪೊಲೀಸರಿಗೆ ಹೆಲ್ಮೆಟ್ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಡಿವೈಎಸ್ಪಿ ಎಸ್. ರೋಷನ್ ಜಮೀರ್ ಮಾತನಾಡಿ,

ಹೆಲ್ಮೆಟ್ ಧರಿಸಿ ಅಪಘಾತ ಉಳಿಸಿ ಧ್ಯೇಯದೊಂದಿಗೆ ಸರ್ಕಾರದನಿಯಮದಜೊತೆಗೆಪ್ರಾಣಕಳೆದುಕೊಳ್ಳುವ ಪ್ರಸಂಗ ತಡೆಯುವಲ್ಲಿ ಹೆಲ್ಮೆಟ್ ತುಂಬ ಸಹಕಾರಿಯಾಗಿದೆ ಎಂದರು.


ಬೈಕ್ ಏರುವ ಸಂದರ್ಭ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿಯೇ ಸಂಚರಿಸುವಂತೆ ಎಲ್ಲರಿಗೂ ಮನವಿ ಮಾಡುವದು ಪ್ರಜ್ಞಾವಂತರ ಕರ್ತವ್ಯ. ಅದರಂತೆ ಕಡ್ಡಾಯವಾಗಿ ಹೆಲ್ಮೆಟ್ಟೊಂದಿಗೆ ಸಂಚಾರ ನಿಯಮ ಪಾಲಿಸಿದ್ದಲ್ಲಿ ಸಾಕಷ್ಟು ಅಪಘಾತಗಳನ್ನು ತಡೆಯಲು ಸಾಧ್ಯವೆಂದರು.

ಈ ಸಂದರ್ಭದಲ್ಲಿ ಸಿಪಿಐ ಸಂಜೀವ ಬಳಗಾರ, ಪಿಎಸ್ಐ ಶಾಂತಾ ಹಳ್ಳಿ, ಕ್ರೈಂ ಪಿಎಸ್ಐ ವಿಜಯ ಕಾಂಬಳೆ, ಎಎಸ್ಐ ಬಿ. ಬಿ. ಬಾಬಾನಗರ, ಮಲ್ಲಿಕಾರ್ಜುನ ಜಂಬಗಿ, ಧರೇಶ ಕುಂಬಾರ, ವಿಠ್ಠಲ ಅಜ್ಜನಗೌಡರ, ಬಡ್ಡೂರ, ಮಧು ಹಳಿಂಗಳಿ, ಮಹೇಶ ಹನಗಂಡಿ, ಸಿದ್ದು ಅಸ್ಕಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ತಂಬಾಕು ಸೇವನೆಯಿಂದ ದೂರವಿರಿ: ತಂಬಾಕು ಮುಕ್ತ ಜೀವನ ಸಾಗಿಸಿರಿ-ಕುಲರತ್ನಭೂಷಣ ಆಚಾರ್ಯಶ್ರೀ

**ರಬಕವಿ:** ವಿಶ್ವ ತಂಬಾಕು ನಿಷೇಧ ದಿನವು ವಿಶ್ವಾದ್ಯಂತ ಪ್ರತಿ ವರ್ಷ ಮೇ.31ರಂದುಆಚರಿಸಲಾಗುತ್ತದೆ. ಅದರ ಆಚರಣೆ ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗದೇ ಎಲ್ಲರೂ ತಂಬಾಕು ಮುಕ್ತ ಜೀವನ ಸಾಗಿಸಿದರೆ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದು ಸಮೀಪದ ಹಳಿಂಗಳಿ ಭದ್ರಗಿರಿ ಬೆಟ್ಟದ ಜೈನ ಮುನಿ 1008 ಕುಲರತ್ನಭೂಷಣ ಆಚಾರ್ಯಶ್ರೀ ತಿಳಿಸಿದರು.

ಶನಿವಾರ ಬೆಳಿಗ್ಗೆ ಭದ್ರಗಿರಿ ಬೆಟ್ಟದಲ್ಲಿ ಹಮ್ಮಿಕೊಂಡ ವಿಶ್ವ ತಂಬಾಕು ಮುಕ್ತದಿನ ನಿಮಿತ್ಯ ಮಕ್ಕಳಿಗೆ ತಂಬಾಕಿನಿಂದ ದೇಹಕ್ಕೆ ಯಾವ ರೀತಿ ಹಾನಿಯಾಗುತ್ತದೆ ಎಂಬುದರ ಕುರಿತು ವಿವರಿಸಿದ ಅವರು ಆಶೀರ್ವಚನ ನೀಡಿದರು.



ವಿಶ್ವ ಆರೋಗ್ಯ ಸಂಘಟನೆಯ ಸದಸ್ಯ ರಾಷ್ಟ್ರಗಳು 1987 ರಲ್ಲಿ ತಂಬಾಕು ಸೇವನೆಯಿಂದ ಉಂಟಾಗುವ ರೋಗ ಮತ್ತು ಸಾವು ನೋವುಗಳನ್ನು ಎಲ್ಲರ ಗಮನಕ್ಕೆ ತರಲು ವಿಶ್ವ ತಂಬಾಕು ನಿಷೇಧ ದಿನವನ್ನು ಆಯೋಜಿಸಿದರು. 1987 ರಲ್ಲಿ ಮೊದಲ ಬಾರಿಗೆ ವಿಶ್ವ ಆರೋಗ್ಯ ಸಂಸ್ಥೆಯು ತಂಬಾಕು ರಹಿತ ದಿನದ ಆಚರಣೆಯ ಬಗ್ಗೆ ಅಧಿಸೂಚನೆ ಹೊರಡಿಸಿತು. ವಿಶ್ವ ಆರೋಗ್ಯ ಸಂಸ್ಥೆಯು ಆರೋಗ್ಯದ ದೃಷ್ಟಿಯಿಂದ ತಂಬಾಕು ನಿಷೇಧದ ಬಗ್ಗೆ ಚಿಂತನೆಯನ್ನು ಕೈಗೊಂಡಿತು. ಇದರ ಸೇವನೆಯಿಂದ ಪ್ರತಿ ವರ್ಷ ಪ್ರಪಂಚದಾದ್ಯಂತ ಆರು ಮಿಲಿಯನ್ ನಷ್ಟು ಜನರು ಮರಣ ಹೊಂದುತ್ತಿದ್ದಾರೆ ಎಂದು ಇತಿಹಾಸದ ಮೂಲಕ ನಾವು ತಿಳಿದುಕೊಳ್ಳಬಹುದು ಎಂದರು.


ಧೂಮಪಾನ ಕೆಟ್ಟದ್ದು.

ಆದರೆ ಧೂಮಪಾನಿಗಳು ಕೆಟ್ಟವರಲ್ಲ. ಸರ್ಕಾರ ಮನುಷ್ಯನ ಭವಿಷ್ಯದ ಬಗ್ಗೆ ಚಿಂತಿಸಿ ತಂಬಾಕು ನಿಷೇಧವನ್ನು ಮಾಡಬೇಕು. ದೇಶದಲ್ಲಿ ಕ್ಯಾನ್ಸರ್ ಹತ್ತಿಕ್ಕಲು ರೆಡ್ ಕ್ರಾಸ್ ಸಂಸ್ಥೆ, ಎನ್ಜಿಓ, ಮುಂತಾದ ಸಂಸ್ಥೆಗಳು ತಂಬಾಕಿನ ದುಷ್ಪರಿಣಾಮಗಳ ಬಗ್ಗೆ ಹಲವು ಉಪನ್ಯಾಸಗಳನ್ನು, ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ.

ಆದ್ದರಿಂದ ತಂಬಾಕಿನಿಂದ ದೂರವಿದ್ದರೆ ನಿಮ್ಮ ಬದುಕು ಸುಂದರ ಮತ್ತು ಸಂತಸಮಯವಾಗಿರುತ್ತದೆ ಎಂದು ವಿವರಿಸಿದರು.

ತಾಲೂಕಿನ ಅನೇಕ ಗ್ರಾಮ ಹಾಗೂ ಪಟ್ಟಣಗಳಿಂದ ಆಗಮಿಸಿದ್ದ ಶ್ರಾವಕ ಶ್ರಾವಕಿಯರು, ಜೈನ ಸಮಾಜದ ಹಿರಿಯರು ಮತ್ತು ಮಕ್ಕಳು ಆಗಮಿಸಿ ತಂಬಾಕಿನಿಂದ ದೇಹಕ್ಕೆ ಹಾನಿಯಾಗುವ ಕುರಿತು ಆಚಾರ್ಯ ಶ್ರೀಗಳಿಂದ ಅರಿತುಕೊಂಡರು. ಅನೇಕರು ಇದೇ ಸಂದರ್ಭದಲ್ಲಿ ತಂಬಾಕು ತ್ಯಜಿಸುವುದಾಗಿ ವಾಗ್ದಾನ ಮಾಡಿದರು.

# ಜಿಎಲ್‌ಬಿಸಿ ಸಿಬ್ಬಂದಿ ಬಸಯ್ಯ ಮಠಪತಿ ವಯೋನಿವೃತ್ತಿ



**ಮಹಾಲಿಂಗಪುರ :** ಪಟ್ಟಣದ ಜಿಎಲ್ಬಿಸಿ ಕಚೇರಿಯಲ್ಲಿ ಸುದೀರ್ಘ 38 ವರ್ಷಗಳ ಸೇವೆ ಸಲ್ಲಿಸಿ ನಿವೃತ್ತರಾದ ಬಸಯ್ಯ ಮಠಪತಿ ಅವರನ್ನು ಅಧಿಕಾರಿಗಳು ಸನ್ಮಾನಿಸಿ ಬೀಳ್ಕೊಟ್ಟರು.

ನಿವೃತ್ತ ಅಧಿಕಾರಿ ಕೆ. ಕೆ. ಜಾಲಿಬೇರಿ, ಪುರಸಭೆ ಮುಖ್ಯಾಧಿಕಾರಿ ಈರಣ್ಣ ದಡ್ಡಿ, ಜಿ.ಎಲ್.ಬಿ.ಸಿ. ಅಧಿಕಾರಿಗಳಾದ ಎಸ್. ಎಸ್. ಕಮತಗಿ, ಎಂ. ಕೆ. ಯಡಪ್ಪನವರ ಭಾಗವಹಿಸಿದ್ದರು. ಬಸಯ್ಯ ಮಠಪತಿ ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ನಿಂಗನಗೌಡ ಪಾಟೀಲ, ರವಿ ಕಮತಗಿ, ಬಸಯ್ಯ ಮಠಪತಿ, ಶ್ರೀಮತಿ ಮಹಾದೇವಿ ಮಠಪತಿ, ಮಲ್ಲಪ್ಪ ತೋಟದ, ಸಿದ್ದಪ್ಪ ಹುದ್ದಾರ, ಅನಿಲ ಮಮದಾಪೂರ, ಶ್ರೀಕಾಂತ ಹಟ್ಟಿ, ರಮೇಶ ರೂಗಿ, ಭೀಮಶಿ ಆರೇಗಾರ,

ಈರಪ್ಪ ದಿನ್ನಿಮನಿ, ಬಸವರಾಜ ಯರಗಟ್ಟಿ, ಮಹಾಲಿಂಗಮಠಪತಿ, ಮಹಾಲಿಂಗಯ್ಯಹಿಟ್ಟಿನಮಠ, ಪರಸಪ್ಪ ಬಿರಾಜನವರ, ಮಲ್ಲಪ್ಪ ಡೋಣಿ, ಅಯೂಬ್ ಪಟ್ಟಿಹಾಳ, ಹಣಮಂತ ನಾವಿ, ಮಹಾಲಿಂಗ ಕಲಾಲ, ಅರ್ಜುನ ಪವಾರ, ಶಿವು ಸಣ್ಣಕ್ಕಿ, ಅನಿಲ ಖವಾಸಿ, ನಾಗೇಶ ನೇಸೂರ ಸೇರಿದಂತೆ ಇನ್ನೂ ಹಲವರು ಪಾಲ್ಗೊಂಡಿದ್ದರು.

# ಕಮಲ್ ಹಾಸನ್ ಹೇಳಿಕೆ ಖಂಡಿಸಿ ಕರವೇ ಪ್ರತಿಭಟನೆ



**ಬಸವನಬಾಗೇವಾಡಿ :** ಕನ್ನಡ ಭಾಷೆಯು ತಮಿಳು ಭಾಷೆಯಿಂದ ಹುಟ್ಟಿದ್ದು ಎಂದು ನಟ ಕಮಲ್ ಹಾಸನ್ ನೀಡಿರವ ಹೇಳಿಕೆಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆಯಿಂದ ಶನಿವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಸರ್ಕಾರಿ ಐಬಿಯಿಂದ ಬಸವೇಶ್ವರ ಸರ್ಕಲದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಟಾಯರ್‌ಗೆ ಬೆಂಕಿ ಹಚ್ಚಿ ಆಕ್ರೋಶವ್ಯಕ್ತಪಡಿಸಲಾಯಿತು.ಪ್ರತಿಭಟನಾಕಾರರನ್ನು ಉದ್ದೇಶಿಸಿ ಸಿಂದಗಿ ತಾಲೂಕ ಕರವೇ ಅಧ್ಯಕ್ಷರಾದ ಶ್ರೀಕಾಂತ್ ಬಿಜಾಪುರ್ ಅವರು ಮಾತನಾಡಿ, ಕನ್ನಡ ಭಾಷೆಯು ತಮಿಳು ಭಾಷೆಯಿಂದ ಹುಟ್ಟಿದ್ದು ಎಂದು ಹೇಳಿಕೆ ನೀಡಿರುವ ಕಮಲ್ ಹಾಸನ್ ಕನ್ನಡ ಜನತೆಯ ಕ್ಷಮೆ ಕೋರಬೇಕು ಇಲ್ಲದಿದ್ದರೆ ಅವರ ಚಿತ್ರಗಳನ್ನು ಕರ್ನಾಟಕದಲ್ಲಿ ನಿಬರ್ಂಧಿಸುತ್ತೇವೆ ಎಂದರು. ಕರವೇ ರಾಜ್ಯ ಸಂಚಾಲಕ ಸಂತೋಷ ಗೌಡ ಪಾಟೀಲ್ ಮಾತನಾಡಿ, ಕನ್ನಡ ಭಾಷೆ ಕನ್ನಡ ನೆಲ ಕನ್ನಡ ಜಲ ಕನ್ನಡ ತಾಯಿಗೆ ಅವಮಾನ ಮಾಡಿದ ಯಾವುದೇ ವ್ಯಕ್ತಿ ಇರಲಿ ರಾಜಕಾರಣಿ ಇರಲಿ ಚಿತ್ರನಟರೇ ಇರಲಿ ಅವರ ವಿರುದ್ಧ ಪ್ರತಿಭಟನೆ ಮಾಡುತ್ತೇವೆ. ಕಮಲ್ ಹಾಸನ್ ಅವರ ಚಿತ್ರವನ್ನು ಕರ್ನಾಟಕದ ಚಿತ್ರಮಂದಿರದಲ್ಲಿ ಪ್ರದರ್ಶನ ಮಾಡಲು ಬಿಡುವುದಿಲ್ಲ. ಅದೇ ರೀತಿ ಕನ್ನಡ ನಟಿ ರಮ್ಯಾ ಅವರು ಕರ್ನಾಟಕದಲ್ಲಿ ಇದ್ದುಕೊಂಡು ಕನ್ನಡ ಜನರಿಂದ ಮುಂದೆ ಬಂದು ಕನ್ನಡಕ್ಕೆ ಅವಮಾನ ಮಾಡಿದ್ದಾರೆ ಅವರ ಪ್ರಕೃತಿ ದಹನ ಮಾಡುತ್ತೇವೆ. ಕರ್ನಾಟಕದ ರಾಜಕಾರಣಿಗಳು ಇದರ ಬಗ್ಗೆ ಚಕಾರ ಎತ್ತುತ್ತಿಲ್ಲ ಅವರಿಗೆ ಕನ್ನಡ ಭಾಷೆಯ ಬಗ್ಗೆ ಅಭಿಮಾನವಿಲ್ಲ ಇದು ನಮ್ಮ ದುರಂತ ಎಂದರು.

ಕರವೇ ರಾಜ್ಯ ಪ್ರಧಾನ ಕಾರ್ಯದರ್ಶಿ ಅಶೋಕ್ ಹಾರಿವಾಳ ಮಾತನಾಡಿ, ರಾಜ್ಯಧ್ಯಕ್ಷರಾದ ನಾರಾಯಣಗೌಡ ಅವರ ಅನುಮತಿ ಮೇರೆಗೆ ಈ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಕನ್ನಡ ಭಾಷೆಗೆ ಅವಮಾನ ಮಾಡಿರುವ ಕಮಲ್ ಹಾಸನ್ ಕರ್ನಾಟಕ ಜನತೆಯಲ್ಲಿ ಕ್ಷಮೆ ಕೋರಬೇಕು. ಇಲ್ಲದಿದ್ದರೆ ಕರ್ನಾಟಕದಲ್ಲಿ ಅವರ ಚಿತ್ರಗಳನ್ನು ಪ್ರದರ್ಶನ ಮಾಡಲು ಬಿಡುವುದಿಲ್ಲ.ಅದೇರೀತಿನಟಿರಮ್ಯಾಕೂಡ ಕನ್ನಡ ಜನತೆಯಲ್ಲಿ ಕ್ಷಮೆ ಕೋರಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಮಾನದಲ್ಲಿ ಕರ್ನಾಟಕದ ತುಂಬಾ ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈಪ್ರತಿಭಟನೆಯಲ್ಲಿಸಿದ್ದುಮೇಟಿ,ಆನಂದ್‌ಕಾಕಂಡಕಿ, ಲಾಳ ಮಶಾಕ್ ಮುದ್ದೇಬಿಹಾಳ, ಅಬ್ದುಲ್ ರಜಾಕ್ ಇನಾಮ್ದಾರ, ರವಿ ವಡ್ಡರ್, ಬುಡ್ಡೇಸಾಬ್ ಪತ್ತೆಪುರ, ಬಸವರಾಜ ಹರಿಜನ್, ರಮೇಶ್ ನಡುವಿನಮನಿ ಸೇರಿದಂತೆ ಕರವೇ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಜೂ.9ರಂದು ಹೋಬಳಿ ಮಟ್ಟದ ಪಿಂಚಣಿ ಅದಾಲತ್



**ವಿಜಯಪುರ :** ಪಿಂಚಣಿದಾರರ ಅಹವಾಲು ಆಲಿಸಲು ಹಾಗೂ ಅರ್ಹರಿಗೆ ಪಿಂಚಣಿ ಮಂಜೂರು ಮಾಡುವ ಕುರಿತ ಸಾಮಾಜಿ-ಕ ಭದ್ರತಾ ಯೋಜನೆಯಡಿಯ ಜಿಲ್ಲೆಯ 13 ಗ್ರಾಮಗಳಲ್ಲಿ ಜೂನ್ 9ರ ಬೆಳಿಗ್ಗೆ 11 ಗಂಟೆಗೆ ಹೋಬಳಿ ಮಟ್ಟದ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.

ಅಂದು ವಿಜಯಪುರದ ಉಪ ವಿಭಾಗಾಧಿಕಾರಿಗಳು ಬಸವನ ಬಾಗೇವಾಡಿ ತಾಲೂಕಿನ ಮಸಬಿನಾಳ ಗ್ರಾಮದ ಶ್ರೀ ಗೌ-ರಿಶಂಕರ ದೇವಸ್ಥಾನದಲ್ಲಿ, ಇಂಡಿ ಉಪ ವಿಭಾಗಾಧಿಕಾರಿಗಳು ಇಂಡಿ ತಾಲೂಕಿನ ಸಂಗೋಗಿ ಗ್ರಾಮದ ಶ್ರೀ ಹನುಮಾನ ದೇವಸ್ಥಾನದಲ್ಲಿ, ವಿಜಯಪುರದ ಗ್ರೇಡ್-2 ತಹಶೀಲ್ದಾರ ಅವರು ವಿಜಯಪುರ ನಗರದ ಲಕ್ಷ್ಮೀ ನಗರದ ಗಚ್ಚಿನಕಟ್ಟಿ ಕಾಲೋನಿಯ ಲಕ್ಷ್ಮೀ ದೇವಸ್ಥಾನ ಆವರಣದಲ್ಲಿ, ತಿಕೋಟಾ ಗ್ರೇಡ್-2 ತಹಶೀಲ್ದಾರ ಅವರು, ಕನಮಡಿ ಗ್ರಾಮದ ಗ್ರಾಮ ಪಂಚಾಯತಿಯ ಕಾರ್ಯಾಲಯದಲ್ಲಿ ಹಾಗೂ ಬಬಲೇಶ್ವರ ಗ್ರೇಡ್-2 ತಹಶೀಲ್ದಾರ ಅವರು ಕಾತ್ರಾಳ ಗ್ರಾಮದ ಶ್ರೀ ಹನುಮಾನ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ನಿಡಗುಂದಿಗ್ರೇಡ್-2ತಹಶೀಲ್ದಾರ ಅಬ್ಬಿಹಾಳಗ್ರಾಮದಶ್ರೀಬಸವೇಶ್ವರ ದೇವಸ್ಥಾನದಲ್ಲಿ, ಕೊಲ್ಹಾರ ತಹಶೀಲ್ದಾರ ಚೀರಲದಿನ್ನಿ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ, ಮುದ್ದೇಬಿಹಾಳ ಗ್ರೇಡ್-2 ತಹಶೀಲ್ದಾರ ಹೊಕ್ರಾಣಿ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ, ತಾಳಿಕೋಟಿಯ ತಹಶೀಲ್ದಾರ ಬಿಂಜಲಬಾವಿ ಗ್ರಾಮದ ಶ್ರೀ ಮಾರುತಿ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಚಡಚಣ ಗ್ರೇಡ್-2 ತಹಶೀಲ್ದಾರ ನಂದ್ರಾಳ ಗ್ರಾಮದ ಗ್ರಾಮ ಚಾವಡಿಯಲ್ಲಿ, ಸಿಂದಗಿ ಗ್ರೇಡ್-2 ತಹಶೀಲ್ದಾರ ಬಿಸನಾಳ ಗ್ರಾಮದ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ, ದೇವರ ಹಿಪ್ಪರಗಿ ಗ್ರೇಡ್-2 ತಹಶೀಲ್ದಾರ ದೇವರ ಹಿಪ್ಪರಗಿಯ ವಾರ್ಡ ಸಂಖ್ಯೆ 8ರ ನಾಡ ಕಚೇರಿಯಲ್ಲಿ ಹಾಗೂ ಆಲಮೇಲ ತಹಶೀಲ್ದಾರ ಅವರು ತೋಂಟಾಪುರ ಗ್ರಾಮದ ಬ್ರಹ್ಮದೇವರ ಗುಡಿಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಸಾಮಾಜಿಕಭದ್ರತೆಯೋಜನೆಯಡಿ ವಿವಿಧ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳಿಗೆ ನೇರ ಹಣ ವರ್ಗಾವಣೆ ಮೂಲಕ ಸರ್ಕಾರದ ಆದೇಶದನ್ವಯ ಪಿಂಚಣಿ ಪಾವತಿಸಲಾಗುತ್ತಿದ್ದು, ಈ ಕಾರ್ಯವನ್ನು ಸಂಬಂಧಿಸಿದ ಬ್ಯಾಂಕ್, ಅಂಚೆ ಕಚೇರಿ ಅಧಿಕಾ-ರಿಗಳ ಸಹಯೋಗದೊಂದಿಗೆ ತಪ್ಪದೇ ಮಾಡಿಸುವಂತೆಯೂ ಹಾಗೂ ಪಿಂಚಣಿ ಅದಾಲತನಲ್ಲಿ ಪಿಂಚಣಿದಾರರ ಮಾಹಿತಿ ಯೊಂದಿಗೆ ಎಲ್ಲಾ ಗ್ರಾಮಗಳ ಗ್ರಾಮ ಲೆಕ್ಕಿಗರು, ಪಂಚಾಯತ್ ಕಾರ್ಯದರ್ಶಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾ-ರಿಗಳು ಹಾಗೂ ಅಂಚೆ ಕಚೇರಿ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಶಿವಾನಂದ ಹಿಳ್ಳಿ ಸೇವಾ ನಿವೃತ್ತಿ: ಬೀಳ್ಕೊಡುಗೆ



**ವಿಜಯಪುರ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಡಿ ಗುಂಪಿನ ಹುದ್ದೆಯಲ್ಲಿ ಕಳೆದ 33 ವರ್ಷಗಳ ಕಾಲ ಸುಧೀರ್ಘ ಸೇವೆ ಸಲ್ಲಿಸಿ, ಮೇ.31ರಂದು ಸರ್ಕಾರಿ ಸೇವೆಯಿಂದ ವಯೋ ನಿವೃತ್ತಗೊಂಡಿರುವ ಶಿವಾನಂದ ಹಿಳ್ಳಿಯವ-ರಿಗೆ ಸನ್ಮಾನಿಸಿ ಆತ್ಮೀಯವಾಗಿ ಬೀಳ್ಕೊಡಲಾಯಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಿಜಯಪುರ ಕಚೇರಿಯಲ್ಲಿ ಹಮ್ಮಿಕೊಂಡ ಬೀಳ್ಕೊಡುಗೆ ಸಮಾರಂಭದಲ್ಲಿ ಕಚೇರಿ ಸಿಬ್ಬಂದಿಗಳು ಹಾಗೂ ಪತ್ರಕರ್ತರು ನಿವೃತ್ತರಾದ ಶಿವಾನಂದ ಹಿಳ್ಳಿ ಹಾಗೂ ಅವರ ಧರ್ಮಪತ್ನಿಯನ್ನು ಸನ್ಮಾನಿಸಿ ಆತ್ಮೀಯವಾಗಿ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಅವರು ಮಾತನಾಡಿ, ಕಳೆದ 1991 ರಂದು ಬೆಳಗಾವಿ ಕಚೇರಿಯಿಂದ ತಮ್ಮ ಸೇವೆಯನ್ನು ಆರಂಭಿಸಿದ ಶಿವಾನಂದ ಹಿಳ್ಳಿ ಅವರು, 1998 ರಿಂದ ವಿಜಯಪುರ ಕಚೇ-ರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಇವರು ಸುದಿರ್ಘವಾಗಿ 33 ವರ್ಷ ಹಾಗೂ 7 ತಿಂಗಳಿಗೊಮ್ಮೆ ಸೇವೆಯನ್ನು ಪೂರೈಸಿ ಇಂದು ಸರ್ಕಾರಿ ಸೇವೆಯಿಂದ ವಯೋ ನಿವೃತ್ತಿಗೊಂಡಿದ್ದಾರೆ. ಇವರ ಸೇವಾ ಅವಧಿಯ ಬಹುಕಾಲ ವಿಜಯಪುರ ಜಿಲ್ಲೆಯಲ್ಲಿಯೇ ಪೂರ್ಣಗೊಳಿಸಿದ್ದಾರೆ. ಇವರು ತಮ್ಮಸೇವಾಅವಧಿಯಲ್ಲಿವಾರ್ತಾ ಇಲಾಖೆಯ ಹಲವು ಅಧಿಕಾರಿ-ಸಿಬ್ಬಂದಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ-ಸಿಬ್ಬಂದಿಗಳ ಜೊತೆಯೂ ಉತ್ತಮ ಒಡನಾಟ ಹೊಂದಿದ್ದರು. ಹಾಗಾಗಿ ಅತ್ಯಂತ ಶಿಸ್ತಿನಿಂದ ಕಾರ್ಯನಿರ್ವಹಿಸಿದ್ದಾರೆ. ಸುದಿರ್ಘ ಸೇವಾ ಅನುಭವ ಹೊಂದಿ, ಸರ್ಕಾರಿ ಸೇವೆಯಿಂದ ವಯೋ ನಿವೃತ್ತಿಗೊಂಡಿರುವ ಶಿವಾನಂದ ಹಿಳ್ಳಿ ಅವರ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಅವರು ಹಾರೈಸಿದರು.

ಈ ಸಂದರ್ಭದಲ್ಲಿ ಸಂಂ-ಯುಕ್ತ ಕರ್ನಾಟಕ ದಿನ ಪತ್ರಿಕೆಯ ಜಿಲ್ಲಾ ವರದಿಗಾರರಾದ ನವೀದ ಅಂಜುಮ್ ಹಾಗೂ ನ್ಯೂಸ್-18 ವರದಿಗಾರ ಗುರು ಗದ್ದನಕೇರಿ ಅವರು ಮಾತನಾಡಿ, ಪತ್ರಕರ್ತರು ಹಾಗೂ ವಾರ್ತಾ ಇಲಾಖೆಗೆ ಅವಿನಾಭಾವ ಸಂಬಂಧವಿದೆ. ಶಿವಾನಂದ ಹಿಳ್ಳಿ ಅವರು ನಿವೃತ್ತಿ ಅಂಚಿನಲ್ಲಿದ್ದಾಗಲೂ ಸಹ ಯುವಕರಂತೆ ಪಾದರಸದಂತೆ ವೇಗವಾಗಿ ಕೆಲಸ ಮಾಡುತ್ತಿದ್ದರು, ಪತ್ರಿಕಾ ಕಚೇರಿಗಳಿಗೆ ಸಮಯಕ್ಕೆ ಸರಿಯಾಗಿ ಆಮಂತ್ರಣ, ಇಲಾಖೆಗಳಿಗೆ ಸಂಬಂಧಿಸಿದ ಮಹತ್ವದ ಪ್ರಕಟಣೆಗಳನ್ನು ಕಾಲ ಕಾಲಕ್ಕೆ ತಲುಪಿಸಿ ತಮ್ಮ ವೃತ್ತಿ ಜೀವನದಲ್ಲಿ ಅನೇಕ ಪತ್ರಕರ್ತರ ಮೆಚ್ಚುಗೆಗೆಪಾತ್ರರಾಗಿದ್ದಾರೆ,ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಅವರು ಆಶಿಸಿದರು.

# ವಾಹನ ಚಾಲಕನ ನಿರ್ಲಕ್ಷ್ಯ 15 ಕುರಿಗಳು ಸಾವು



**ಇಂಡಿ :** ತಾಲೂಕಿನ ತಡವಲಗಾ ಗ್ರಾಮದ ಬಳಿ ಖಾಸಗಿ ಶಾಲಾ ವಾಹನ ಚಾಲಕನ ನಿರ್ಲಕ್ಷ್ಯದಿಂದ 15 ಕುರಿಗಳು, ಒಂದು ಎಮ್ಮೆಕರು ಸಾವನಪ್ಪಿರುವ ಘಟನೆ ನಡೆದಿದೆ.

ಖಾಸಗಿ ಶಾಲಾ ವಾಹನ ಚಾಲಕನ ಅತೀ ವೇಗವೇ ಅಪಘಾತಕ್ಕೆ ಕಾರಣ ಎಂದು ಕುರಿಗಾರರ ಆರೋಪವಾಗಿದೆ.ರಸ್ತೆ ಬದಿಯಲ್ಲಿರುವ ಕುರಿಗಳಿಗೆ ಶಾಲಾ ವಾಹನ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲಿ15ಕುರಿಗಳು,ಒಂದುಎಮ್ಮೆಕರುಮೃತಪಟ್ಟಿವೆ. ಸತ್ಯೆಪ್ಪ ಟೆಂಗಳೆ ಎಂಬುವರಿಗೆ ಸೇರಿದ ಎಮ್ಮೆಕರು ಹಾಗೂ ಕುರಿಗಳು ಮೃತಪಟ್ಟಿವೆ.

32 ಕುರಿಗಳ ಪೈಕಿ 15 ಕುರಿಗಳು ಸಾವನಪ್ಪಿದ್ದು, ಉಳಿದ ಕುರಿಗಳಿಗೆ ಗಂಭೀರ ಗಾಯಗಳಾಗಿವೆ.

ಹೊರ್ತಿ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕರ್ನಾಟಕ ಗ್ರಾಮೀಣ ಬ್ಯಾಂಕ್ ಮಾಜಿ ನೌಕರರಿಂದ ವಿವಿಧ ಸೌಲಭ್ಯಗಳನ್ನು ನೀಡಲು ಪ್ರತಿಭಟನೆ ಧರಣಿ



**ಬಳ್ಳಾರಿ :** ಕರ್ನಾಟಕ ಬ್ಯಾಂಕಿನಲ್ಲಿ ಹಲವಾರು ವರ್ಷಗಳಿಂದ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡಿ ನಿವೃತ್ತಿ ಹೊಂದಿದ ಹಲವಾರು ಜನ ನೌಕರರು ಮತ್ತು ಕುಟುಂಬ ವರ್ಗದವರು ತಮಗೆ ಬ್ಯಾಂಕಿನಿಂದ ದೊರೆಯ ಬೇಕಾದ, ಸಿ ಎಲ್ ಪಿ ಎಫ್ ಗ್ರಾಚುಟಿ ಸೇರಿದಂತೆ ಇತರೆ ಅನೇಕ ಸೌಲಭ್ಯಗಳನ್ನು ನೀಡಲು ಬ್ಯಾಂಕ್ ಅಧಿಕಾರಿಗಳು ಮೀನಾ ಮೇಷ ಎಣಿಸುತ್ತಿದ್ದಾರೆ, ನಮಗೆ ಮತ್ತು ನಮ್ಮ ಕುಟುಂಬಕ್ಕೆ ಬರಬೇಕಾದ ನ್ಯಾಯ ಹಿತವಾದ ಸೌಲಭ್ಯಗಳನ್ನು ಒದಗಿಸಿ ಕೊಡಬೇಕೆಂದು ಗಾಂಧಿನಗರದ ಕರ್ನಾಟಕ ಗ್ರಾಮೀಣ ಬ್ಯಾಂಕಿನ ಮುಖ್ಯ ಕಚೇರಿಯ ಎದುರುಗಡೆ ನಿವೃತ್ತ ನೌಕರರು ಮತ್ತು ಅವರ ಕುಟುಂಬದವರು ಕಳೆದ ಮೂರು ನಾಲ್ಕು ದಿನಗಳಿಂದ ಪ್ರತಿಭಟನೆಯನ್ನು ನಡೆಸುತ್ತಿದ್ದಾರೆ.

ಆದರೆ ಇಲ್ಲಿಯವರೆಗೂ ಯಾವುದೇ ಬ್ಯಾಂಕ್ ಉನ್ನತ ಅಧಿಕಾರಿಗಳು ಈ ಪ್ರತಿಭಟನಾ ನಿರತರನ್ನು ಭೇಟಿಯಾಗದೆ ಅವರ ಸಮಸ್ಯೆಯನ್ನು ಆಲಿಸದೆ ನಿರ್ಲಕ್ಷ ವಹಿಸಿದ್ದಾರೆ ಈ ಬ್ಯಾಂಕ್ ಅಧಿಕಾರಿಗಳ ಕ್ರಮಕ್ಕೆನಿವೃತ್ತನೌಕರರುಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ.

ಪ್ರತಿಭಟನಾ ನೇರಕ ಸ್ಥಳಕ್ಕೆ ಭೇಟಿಯಾದ ಪತ್ರಕರ್ತನ್ನು ಉದ್ದೇಶಿಸಿ ಮಾತನಾಡಿದ ಶರ್ಮ ಅವರು ನ್ಯಾಯಾಲಯದ ಆದೇಶ ವಿದ್ದರೂ ಸಹ ಬ್ಯಾಂಕ್ ನ ಉನ್ನತ ಅಧಿಕಾರಿಗಳುಮತ್ತುಅಧ್ಯಕ್ಷರುಆದೇಶವನ್ನು ಪಾಲಿಸದೆ ನಾವ್ ಆಡಿದ್ದೆ ಆಟ ಎಂಬಂತೆ ವರ್ತಿಸುತ್ತಾ ನಿವೃತ್ತ ಬ್ಯಾಂಕ್ ನೌಕರರನ್ನು ಮತ್ತು ಅವರ ಕುಟುಂಬದವರನ್ನು ಗೋಳು ಹೊಯ್ದುಕೊಳ್ಳುತ್ತಿದ್ದಾರೆ,

ನಿವೃತ್ತ ನೌಕರರು ಎಂದರೆ ಹಿರಿಯ ನಾಗರಿಕರಿದ್ದಂತೆ ಅವರನ್ನು ಈ ರೀತಿಯಾಗಿ ಕಡೆಗಣಿಸುವುದು ಸಹ ಅಪರಾಧವಾಗುತ್ತದೆ ಕೂಡಲೇ ನಮಗೆ ಸಿಗಬೇಕಾದ ಸೌಲಭ್ಯಗಳನ್ನು ಬ್ಯಾಂಕಿನಿಂದ ಒದಗಿಸಿ ಕೊಡಬೇಕೆಂದು ಈ ಸಂದರ್ಭದಲ್ಲಿ ಬ್ಯಾಂಕ್ ನ ಅಧ್ಯಕ್ಷರನ್ನು ಪ್ರತಿಭಟನಾ ನಿರತರು ಒತ್ತಾಯಿಸಿದರು ಈ ಧರಣಿಯಲ್ಲಿಎಚ್ ಬಸವರಾಜ್ ಅಧ್ಯಕ್ಷರು,ಎಲ್ ಬಿ ಚಿತ್ತಾಪುರ ಉಪಾಧ್ಯಕ್ಷರು,

ಕೆ ಎಸ್ ಎಸ್ ಶರ್ಮಾ ಶ್ರೀಧರ್ ಹೊನ್ನಳ್ಳಿ, ಇಂದ್ರಮ್ಮ, ಶೈಲಜಾ, ಹೇಮಲತಾ, ಅಂಜುಮ್ ಬಾನು, ಪ್ರತಿಮಾ ಮತ್ತು ಇತರರು ಭಾಗವಹಿಸಿದ್ದರು.

# ಕಾಣೆಯಾದ ನನ್ನ ಮಗನನ್ನು ಹುಡುಕಿ ಕೊಡಿ: ರಿಯಾಜ್ ಉನ್ನಿಸಾ ಎಸ್‌ಪಿಗೆ ಮನವಿ



**ಬಳ್ಳಾರಿ :** ನಗರದ ವಾರ್ಡ ನಂ.27, ಶಂಕರ್ ಬೀದಿ ಕೌಲ್ ಬಜಾರ್ ಬಳ್ಳಾರಿ ವಿಳಾಸದಿಂದ ಕಳೆದ ಹಲವು ತಿಂಗಳ ಹಿಂದೆ ನನ್ನ ಮಗನಾದ ಮಹಮದ್ ರಿಜ್ವಾನ್ ದಿನಾಂಕ ನಂಬರ್ 3 2024 ರಂದು ಕಾಣೆಯಾಗಿದ್ದು,

ನಾವು ಅವನನ್ನು ಅಲ್ಲಿ ಇಲ್ಲಿ ಹುಡುಕಾಡಿದರೂ ಸಹ ಎಲ್ಲಿಯೂ ಪತ್ತೆ ಆಗಿರುವುದಿಲ್ಲ ಕಾರಣ ನಾವು ನಂಬರ್ 6 ರಂದು ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿರುತ್ತೇವೆ (ಅಪರಾಧ ಸಂಖ್ಯೆ : 0195 2024) ಇಲ್ಲಿಯವರೆಗೆ ಅವನು ಪತ್ತೆಯಾಗಿರುವುದಿಲ್ಲ, ಅವನನ್ನು ಪತ್ತೆ ಮಾಡಿಕೊಡುವಂತೆ ನಾವು ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು ಸಹ ಇಲ್ಲಿಯವರೆಗೆಪೊಲೀಸರುಯಾವುದೇ ಕ್ರಮ ಕೈಗೊಳ್ಳದೆ ನನ್ನ ಮಗನನ್ನು ಹುಡುಕಿಕೊಡುವಲ್ಲಿ ವಿಫಲರಾಗಿದ್ದಾರೆ. ಕಾರಣ ದಯಾಳುಗಳಾದ ತಾವುಗಳು ನನ್ನ ಮಗನನ್ನು ಪತ್ತೆ ಮಾಡಿ ಕೊಡಲು ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇನೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೋಭಾ ರಾಣಿ ವಿ.ಜೆ ಅವರಲ್ಲಿ ರಿಯಾಜ್ ಉನ್ನಿಸಾ ಅಲವತ್ತುಕೊಂಡರು.

# ವಿಶ್ವ ಮಾದಕ ವಸ್ತು ರಹಿತ ದಿನಾಚರಣೆ ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ



**ಯಲಬುರ್ಗಾ :** ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ ,ಯುವ ಸಮುದಾಯ ಗುಟಕಾ, ಸಿಗರೆಟ್, ಧೂಮಪಾನ ಸೇವನೆಯಿಂದ ದುಶ್ಚಟದಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳುವಂತೆ ಡಾ. ವಿವೇಕ ವಾಗಲೆ ಅವರು ಯಲಬುರ್ಗಾ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜರುಗಿದ , ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ, ಆರೋಗ್ಯ ಇಲಾಖೆ ಇವುಗಳ ಸಹಕಾರದಲ್ಲಿ ವಿಶ್ವ ಮಾದಕ ವಸ್ತು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಐ ಟಿ ಐ ಸಂಸ್ಥೆಯ ಪ್ರಾಚಾರ್ಯ ವೀರಭದ್ರಪ್ಪ ಕಾಳಗಿ ಅವರು ದೀಪ ಬೆಳಗಿಸಿ ಮಾತನಾಡಿ ವಿವಿಧ ಚಟಗಳಿಗೆ ಅಂಟಿಕೊಳ್ಳದೆ ಉತ್ತಮರ ಸಂಘ ಮಾಡಿಕೊಂಡು ಸುಂದರ ಬದುಕು ನಿಮ್ಮದಾಗಿಸಿಕೊಳ್ಳಿ ಎಂದರು.

ಮೋಜು ಮಸ್ತಿಗಾಗಿ ವಿದ್ಯಾರ್ಥಿಗಳು ಸಿಗರೇಟ್, ಗುಟಕಾ ಅತಿಯಾಗಿ ಸೇವನೆ ಮಾಡುತ್ತಾರೆ ಇದರಲ್ಲಿ ಸಾಕಷ್ಟು ವಿಷವಿರುತ್ತದೆ ಇದರ ಅರಿವು ಇದ್ದರು ಸಹ ಸೇವನೆ ಮಾಡಿ ಇದರಿಂದ ಕ್ಯಾನ್ಸರ್ ರೋಗಕ್ಕೆ ತುತ್ತಾಗಿ ಜೀವನ ಪರ್ಯಂತಾರ ತೊಂದರೆ ಅನುಭವಿಸಿ ಸಾವನ್ನಪ್ಪುತ್ತಾರೆ ಆದ್ದರಿಂದ ವಿದ್ಯಾರ್ಥಿಗಳು ರೋಗ ರುಜಿನಗಳಿಂದ ತೊಂದರೆ ಅನುಭವಿಸಿ ಮರಣ ಹೊಂದುತ್ತಾರೆ , ಯುವ ಸಮುದಾಯ ದುಶ್ಚಟಗಳಿಂದ ದೂರ ಇರುವಂತೆ ಡಾ. ಮಾರುತಿ ದೊಡ್ಡಮನಿ ಮಾತನಾಡಿದರು.

ಒಂದು ಸಿಗರೇಟ್ ಸೇವನೆ ಮಾಡಿದರೆ ಏಳು ನಿಮಿಷ ನಮ್ಮ ಆಯುಷ್ಯ ಕಡಿಮೆಯಾಗುತ್ತದೆ ಮತ್ತು ಆರೋಗ್ಯ ಹದಗೆಡುತ್ತದೆ ಆದ್ದರಿಂದ ನಮ್ಮ ಆರೋಗ್ಯ ಸಂಪತ್ತನ್ನು ಕಾಪಾಡಬೇಕು, ಕೋಟಿ ಸಂಪತ್ತು ಗಿಂತ ಆರೋಗ್ಯ ಸಂಪತ್ತು ಮುಖ್ಯವಾದದ್ದು ಎಂದು ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಶರಣಬಸಪ್ಪ ದಾನಕೈ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ವೇಳೆ ಮೇಲ್ವಿಚಾರಕಿ ಕಾವ್ಯ, ಜ್ಞಾನ ವಿಕಾಸ ಸಮಿತಿಯ ಸಮನ್ವಯಾಧಿಕಾರಿ ರತ್ನ ಪಾಟೀಲ, ಸೇವಾ ಪ್ರತಿನಿಧಿ ವಿಜಯಲಕ್ಷ್ಮೀ, ಒಕ್ಕೂಟದ ಅದ್ಯಕ್ಷೆ ರತ್ತಮ್ಮ ತಳಕಲ್ಲ, ಆರೋಗ್ಯ ಇಲಾಖೆಯ ಕಾಳಪ್ಪ ಬಡಿಗೇರ, ಚಂದ್ರಶೇಖರ ನಾಯಕ, ಶಂಕರ ಪುರಾಣಿಕ ಹಾಗೂ ಐಟಿಐ ಸಿಬ್ಬಂದಿಗಳಾದ ಮಂಜುನಾಥ ಮುರಡಿ, ಚನ್ನಬಸಮ್ಮ ಹಿರೇಮಠ ಸೇರಿದಂತೆ ಇತರರು ಇದ್ದರು.





ಇಂದು ಬಾಗಲಕೋಟೆಯ ಅಲೆಮಾರಿ ಕಾಲೋನಿ (ಎಪಿಎಂಸಿ)ಯಲ್ಲಿ ಸತೀಶ್ ಜಾರಕಿಹೊಳಿ ಸಾಹುಕಾರ್ ಅಭಿಮಾನಿ ಬಳಗದಿಂದ ಅಲೆಮಾರಿ ಜನಾಂಗದ ಮಕ್ಕಳಿಂದ ಕೇಕ್ ಕತ್ತರಿಸಿ ಅಲ್ಪೋಪಹಾರ ವಿತರಿಸಿ ಅರ್ಥಪೂರ್ಣವಾಗಿ ಹುಟ್ಟು ಹಬ್ಬವನ್ನು ಆಚರಿಸಲಾಯಿತು, ಈ ಸಂದರ್ಭದಲ್ಲಿ ಬಾಗಲಕೋಟೆ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಕೆಪಿಸಿಸಿ ಸದಸ್ಯರಾದ ರಕ್ಷಿತಾ ಭರತ್ ಕುಮಾರ್ ಈಟಿ, ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಜಿಲ್ಲಾಧ್ಯಕ್ಷರು ಹಾಗೂ ಜಿಲ್ಲಾ ಸಹಕಾರಿ ಯೂನಿಯನ್. ನಿ ನಿರ್ದೇಶಕರಾದ ದ್ಯಾಮಣ್ಣ ಗಾಳಿ, ವಿಜಯಪುರ ಬಾಗಲಕೋಟೆ ಕೆಎಂಎಫ್ ನಿರ್ದೇಶಕರಾದ ಲಕ್ಷ್ಮಣ ಮಾಲಗಿ, ಬಾಗಲಕೋಟೆ ನಗರ ಬ್ಲಾಕ್ ಅಧ್ಯಕ್ಷರಾದ ರಜಾಕ ಬೆನ್ನೂರು , ಬಾಗಲಕೋಟೆ ತಾಲೂಕ ಮಾನಬಂದತ್ವ ವೇದಿಕೆ ಸಂಚಾಲಕ ಜಯರಾಜ ಹದಿಕಾರ, ವಕೀಲರಾದ ರಾಜು ಲಮಾಣಿ, ಮಹೇಶ್ ಗದ್ದನಕೇರಿ ಅಲೆಮಾರಿ ನಿಗಮ ನಿರ್ದೇಶಕರಾದ ಹನುಮಂತ ಬಜಂತ್ರಿ,ಸುಭಾಷ್ ಲಮಾಣಿ, ಮಲ್ಲು ಲಮಾಣಿ, ಶಿವಾನಂದ ಹುಸೇನ್ ಹವೇಲಿ, ಮಲ್ಲನಗೌಡ ಗೌಡರ್, ಜಗದೀಶ್ ಮನ್ನೂರ್, ಬಿಲಾಲ್ ತಾಳಿಕೋಟಿ, ಬಾಲು ಚೌಹಾನ್, ಶ್ರವಣ ಖಾತೆದಾರ್ ಉಪಸ್ಥಿತರಿದ್ದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State

Designed by MKG-9535762618